# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 | ಸಂಚಿಕೆ – 28 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ : 02–08–2023 ಬುಧವಾರ | ಪುಟ: 4 | ಬೆಲೆ : ರೂ.2–00

Volume - 01 | Issue - 28 | Title- Code: KARKAN 28269 | Chitradurga | Date : 02-08-2023 Wednesday | Page: 4 | Price: Rs. 2-00



ಒಳ ಪುಟದ ಸುದ್ದಿಗಳು

2 ನಿರುದ್ಯೋಗ ಸಮಸ್ಯೆ ನಿವಾರಣೆಗೆ ಜಿಟಿಟಿಸಿ ಕೇಂದ್ರ ಮದ್ದು : ರಘುಮೂರ್ತಿ

3 ಜನಪದ ಮತ್ತು ಜಾನಪದ ಕಲೆ ನಮ್ಮ ಸಂಸ್ಕೃತಿಯ ಅಂಗ

4 ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿ


# ಕಲುಷಿತ ನೀರು ಸೇವನೆ 36 ಜನ ಅಸ್ವಸ್ಥ : ಇಬ್ಬರ ಸಾವು

ಚಿತ್ರದುರ್ಗ: ಕಲುಷಿತ ನೀರು ಸೇವಿಸಿ ಮಹಿಳೆಯೊಬ್ಬರು ಮೃತಪಟ್ಟು ಸುಮಾರು 36 ಕ್ಕೂ ಹೆಚ್ಚು ಜನರು ಅಸ್ವಸ್ಥಗೊಂಡಿರುವ ಘಟನೆ ಮಂಗಳವಾರ ಚಿತ್ರದುರ್ಗ ನಗರದ ಕವಾಡಿಗರಹಟ್ಟಿ ಬಡಾವಣೆಯಲ್ಲಿ ನಡೆದಿದೆ.

ಕಲುಷಿತ ನೀರು ಸೇವಿಸಿ ಅಸ್ವಸ್ಥಗೊಂಡಿದ್ದ ಮಂಜುಳಾ (21), ಚಿಕಿತ್ಸೆ ಫಲಿಸದೆ ಸಾವನ್ನಪ್ಪಿರುವ ಮಹಿಳೆ. ಫ್ರೀಡ್ಜ್ ರಿಪೇರಿಗೆಂದು ಬೆಂಗಳೂರಿಗೆ ತೆರಳಿದ ರಘು (27) ಎಂಬುವರು ಸಹ ಮೃತಪಟ್ಟಿದ್ದಾರೆ.



ನಗರಸಭೆ ವತಿಯಿಂದ ಶಾಂತಿಸಾಗರದ ಕುಡಿಯುವ ನೀರನ್ನು ಮೊದಲು ಟ್ಯಾಂಕ್ ನಲ್ಲಿ ಶೇಖರಿಸಿ ನಂತರ ನಗರದ ಹಲವು ಬಡಾವಣೆಗಳಿಗೆ ಪೈಪ್ ಗಳ ಮೂಲಕ ಸರಬರಾಜು ಮಾಡಲಾಗುತ್ತಿತ್ತು. ಎಂದಿನಂತೆ ಇಂದು ಕೂಡ ಶಾಂತಿಸಾಗರದಿಂದ ನೀರು ಸರಬರಾಜು ಮಾಡಲಾಗಿದ್ದು, ಇದೇ ನೀರನ್ನು ಕವಾಡಿಗರಹಟ್ಟಿ ಬಡಾವಣೆಗೂ ಸಹ ಸರಬರಾಜು ಮಾಡಲಾಗಿದೆ. ಆದ–ರೆ ಪ್ರತಿದಿನದಂತೆ ಇಂದು ಸಹ ನೀರನ್ನು ಸೇವನೆ ಮಾಡಿರುವ ಕವಾಡಿಗರಹಟ್ಟಿ ಬಡಾವಣೆಯ ವೃದ್ದರು, ಮಹಿಳೆಯರು ಹಾಗೂ ಮಕ್ಕಳು ವಾಂತಿ, ಭೇದಿಯಿಂದ ಅಸ್ವಸ್ಥಗೊಂಡಿದ್ದಾರೆ. ಕೂಡಲೇ ಸ್ಥಳೀಯರು ಜನರು ಅಸ್ವಸ್ಥಗೊಂಡಂತಹ ಜನರನ್ನು ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಿದ್ದಾರೆ. ಇದರಲ್ಲಿ ತೀವ್ರ ಅಸ್ವಸ್ಥಗೊಂಡಿದ್ದ ಮಂಜುಳಾ ಎಂಬ ಮಹಿಳೆ ಚಿಕಿತ್ಸೆ ಫಲಿಸದೆ ಸಾವನ್ನಪ್ಪಿದ್ದಾರೆ. ಇನ್ನೂ ಮೂರು ಜನರ ಸ್ಥಿತಿ ಗಂಭೀರವಾಗಿದ್ದು, 10 ಮಕ್ಕಳು ಸೇರಿದಂತೆ 20 ಜನರು ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಶಾಂತಿ ಸಾಗರದಿಂದ ಪೂರೈಕೆ ಆಗುವ ಕುಡಿಯುವ ನೀರು ಟ್ಯಾಂಕ್ ಗೆ ಶೇಖರಣೆ ಮಾಡಲಾಗುತ್ತಿದ್ದು, ಈ ಟ್ಯಾಂಕ್ ನ್ನು ಹಲವು ವರ್ಷಗಳು ಕಳೆದರೂ ಸ್ವಚ್ಚಗೊಳಿಸಿಲ್ಲ. ಸುಚಿತ್ವ ಇಲ್ಲದೆ ಕಸ, ಕಡ್ಡಿ, ಕೊಳಚೆ ನೀರು ಸೇರಿ ಕುಡಿಯುವ ನೀರು ಕಲುಷಿತಗೊಂಡಿದೆ. ಜನರು ವಾಂತಿ, ಭೇದಿ ಮಾಡಿ ಅಸ್ವಸ್ಥರಾಗಿ ಒಬ್ಬರು ಮೃತಪಡಲು ಇದೇ ಮೂಲ ಕಾರಣ ಎನ್ನುವ ಸಾರ್ವಜನಿಕರು ನಗರಸಭೆ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ವ್ಯಸನಮುಕ್ತ ಸಮಾಜಕ್ಕೆ ಕೈ ಜೋಡಿಸಿ

**ಚಿತ್ರದುರ್ಗ** : ಮದ್ಯ, ಮಾದಕ ವ್ಯಸನಗಳಿಂದ ದೂರವಿದ್ದು, ವ್ಯಸನಮುಕ್ತ, ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರು ಕೈಜೋಡಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ಮದ್ಯಪಾನ ಸಂಯಮ ಮಂಡಳಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆಯಲ್ಲಿ ಡಾ. ಮಹಾಂತ ಶಿವಯೋಗಿಗಳ ಭಾವಚಿತ್ರಕ್ಕೆ ಪು?ï ನಮನ ಸಲ್ಲಿಸಿ ಅವರು ಮಾತನಾಡಿದರು.

ಮದ್ಯಪಾನ ಹಾಗೂ ತಂಬಾಕಿನ ವ್ಯಸನಗಳಿಂದ ನಗರ ಮತ್ತು ಗ್ರಾಮೀಣ ಪ್ರದೇಶದ ಜನರು ಆರೋಗ್ಯ ಹಾಳು ಮಾಡಿಕೊಳ್ಳುವುದರ ಜೊತೆಗೆ ಪ್ರಾಣ–ಕ್ಕೆ ಅಪಾಯ ತಂದುಕೊಳ್ಳುತ್ತಿದ್ದಾರೆ. ನಾವು ವ್ಯಸನಗಳ ದಾಸರಾಗದೇ ಆರೋಗ್ಯಕರ ಸಮಾಜ ನಿರ್ಮಾಣ ಮಾಡಲು ಮುಂದಾಗೋಣ ಎಂದು ಸಲಹೆ ನೀಡಿದರು.



ಕುಟುಂಬದಲ್ಲಿ ಒಬ್ಬರು ವ್ಯಸನಿಗಳಾದರೇ ಇಡೀ ಕುಟುಂಬವೇ ಹಾಳಾಗುತ್ತದೆ. ಈ ನಿಟ್ಟಿನಲ್ಲಿ ವ್ಯಸನಮುಕ್ತ ಸಮಾಜ ನಿರ್ಮಾಣ ಮಾಡಲು ನಾವೆಲ್ಲರೂ ಇಂದಿನಿಂದಲೇ ಪರಿವರ್ತನೆಯಾಗಬೇಕು. ಪೋ?ಕ ಜೀವನಶೈಲಿ, ವರ್ತನೆಗಳು ತಮ್ಮ ಮಕ್ಕಳಿಗೆ ಮಾದರಿಯಾಗಿರಬೇಕು. ತಮ್ಮ ಸುತ್ತಮುತ್ತಲಿನ ಪರಿಸರ ಉತ್ತಮವಾಗಿದ್ದರೆ ಮಕ್ಕಳು ಚೆನ್ನಾಗಿ ಬೆಳೆಯಲು ಸಾಧ್ಯ. ತಮ್ಮ ಕುಟುಂಬದೊಂದಿಗೆ ಪರಿಸರವನ್ನು ವ್ಯಸನಮುಕ್ತಗೊಳಿಸಲು ಬದ್ಧರಾಗೋಣ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ್ ಮಾತನಾಡಿ,

4ನೇ ಪುಟಕ್ಕೆ

## ಫಾಸ್ಟ್ ನ್ಯೂಸ್

### ವಾಣಿಜ್ಯ ಸಿಲಿಂಡರ್ ಬೆಲೆ ಇಳಿಕೆ



ನಮ್ಮ ಜನ ವಾರ್ತೆ
**ನವದೆಹಲಿ** : ಬೆಲೆ ಏರಿಕೆಯಿಂದ ಕಂಗಾಲು ಆಗಿರುವ ಜನರು ತುಸು ನೆಮ್ಮದಿಯ ನಿಟ್ಟಿಸಿರು ಬಿಟ್ಟಿದ್ದಾರೆ. ವಾಣಿಜ್ಯ ಸಿಲಿಂಡರ್‌ಗೆ ಮಾತ್ರ ಅನ್ವಯವಾಗುವಂತೆ ಇಂದಿನಿಂದ ಬೆಲೆ ತುಸು ಕಡಿಮೆಯಾಗಿದೆ.ಭಾರತ್, ಇಂಡೇನ್, ಎಚ್‌ಪಿಯಂತಹ ತೈಲ ಕಂಪನಿಗಳು 19 ಕೆಜಿ ವಾಣಿಜ್ಯ ಸಿಲಿಂಡರ್ ಬೆಲೆಯಲ್ಲಿ 100 ರೂ ಕಡಿತ ಮಾಡಿದ್ದಾರೆ. ಆದರೆ ಗೃಹ ಬಳಕೆ ಸಿಲಿಂಡರ್ ಬೆಲೆ ಸ್ಥಿರವಾಗಿದೆ.ವಾಣಿಜ್ಯ ಸಿಲಿಂಡರ್ ಬೆಲೆ ಇಳಿಕೆಯಾಗಿರುವ ಹಿನ್ನಲೆಯಲ್ಲಿ ವ್ಯಾಪಾರಿಗಳು, ಹೋಟೆಲ್ ವರ್ಗದವರಿಗೆ ಬೆಲೆ ಇಳಿಕೆ ಕೊಂಚ ಸಮಾಧಾನ ತಂದಿದೆ.

ದೆಹಲಿಯಲ್ಲಿ ವಾಣಿಜ್ಯ ಗ್ಯಾಸ್ ಸಿಲಿಂಡರ್ ಬೆಲೆ 1,680 ರೂಪಾಯಿ,ಕೋಲ್ಕತ್ತಾದಲ್ಲಿ 1,802 ರೂಪಾಯಿ, ಮುಂಬೈನಲ್ಲಿ 1,640 ರೂಪಾಯಿ ಮತ್ತು ಚೆನ್ನೈನಲ್ಲಿ 1,852 ರೂಪಾಯಿ, ಬೆಂಗಳೂರಿನಲ್ಲಿ 14.2 ಕೆಜಿ ಸಿಲಿಂಡರ್ ಬೆಲೆ 1,105 ರೂಪಾಯಿ ಇದೆ. 5 ಕೆಜಿ ಸಿಲಿಂಡರ್ ಬೆಲೆ 406 ರೂಪಾಯಿ ನ?ï ಇದೆ.

ಬೆಂಗಳೂರಿನಲ್ಲಿ 19 ಕೆಜಿ ವಾಣಿಜ್ಯ ಬಳಕೆ ಸಿಲಿಂಡರ್ ಬೆಲೆ 1,767 ರೂಪಾಯಿ ಆಗಿದೆ. ರಾಜಧಾನಿಯಲ್ಲಿ 92.50 ರೂ.ವರೆಗೆ ಬೆಲೆ ಇಳಿದಿದೆ.

ಗೃಹ ಬಳಕೆಯ 14.2 ಕೆಜಿ ಸಿಲಿಂಡರ್ ಬೆಲೆ ಸ್ಥಿರವಾಗಿದೆ. ಕೊನೆಯ ಬಾರಿ ಮಾರ್ಚ್‌ನಲ್ಲಿ ಸಿಲಿಂಡರ್ ಬೆಲೆ ಬದಲಾಗಿತ್ತು. ಸದ್ಯ 14.2 ಕೆಜಿ ಸಿಲಿಂಡರ್ ಬೆಲೆ 1,103 ರೂಪಾಯಿ ಇದೆ.ಈ ತಿಂಗಳು ಗೃಹ ಬಳಕೆಯ ಸಿಲಿಂಡರ್ ಬೆಲೆ ಇಳಿಕೆಯಾಗುವ ನಿರೀಕ್ಷೆಯಿತ್ತು. ಆದರೆ ತೈಲ ಕಂಪನಿಗಳು ಕೇವಲ ವಾಣಿಜ್ಯ ಸಿಲಿಂಡರ್ ಬೆಲೆ ಇಳಿಕೆ ಮಾಡಿವೆ.

### 200 ಯುನಿಟ್ ವಿದ್ಯುತ್ ಮೀರಿದರೆ ಅರ್ಜಿ ರಿಜೆಕ್ಟ್ : ಕೆ.ಜೆ.ಜಾರ್ಜ್



**ಬೆಂಗಳೂರು** : 'ಗೃಹಜ್ಯೋತಿ' ಯೋಜನೆ ಯಡಿ ಅರ್ಜಿ ಸಲ್ಲಿಸಿದ ಎಲ್ಲರಿಗೂ ಉಚಿತ ವಿದ್ಯುತ್ ನೀಡಲಾಗುತ್ತದೆ, ಆದರೆ 200 ಯೂನಿಟ್ ಗಿಂತ ಹೆಚ್ಚು ವಿದ್ಯುತ್ ಬಳಸಿದ್ರೆ ಅರ್ಜಿ ರಿಜೆಕ್ಟ್ ಆಗುತ್ತದೆ ಎಂದು ಇಂಧನ ಸಚಿವ ಕೆ.ಜೆ ಜಾರ್ಜ್ ಸ್ಪಷ್ಟನೆ ನೀಡಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿದ ಸಚಿವರು ಈ ಬಗ್ಗೆ ಸ್ಪ?ನೆ ನೀಡಿದರು. ಈಗಾಗಲೇ ಗೃಹಜ್ಯೋತಿ ಯೋಜನೆಗೆ 1.43 ಕೋಟಿ ಗ್ರಾಹಕರು ಅರ್ಜಿ ಸಲ್ಲಿಸಿದ್ದಾರೆ. 200 ಯೂನಿಟ್ ಒಳಗೆ ವಿದ್ಯುತ್ ಬಳಸಿದ್ರೆ ಬಿಲ್ ಪಾವತಿಸುವಂತಿಲ್ಲ. ಒಂದು ವ?ದ ಸರಾಸರಿ ವಿದ್ಯುತ್ ಬಿಲ್ ಪರಿಗಣಿಸಿ ಉಚಿತ ವಿದ್ಯುತ್ ನೀಡಲಾಗುತ್ತೆ. 200 ಯೂನಿಟ್ ಗಿಂತ ಹೆಚ್ಚು ಬಳಸಿದರೆ ಅರ್ಜಿ ರಿಜೆಕ್ಟ್ ಆಗಲಿದೆ ಎಂದರು.

ಜುಲೈ ತಿಂಗಳಿನಲ್ಲಿ ನಿಗದಿತ ವಿದ್ಯುತ್ ಬಳಕೆ ಮಾಡಿದ ಗೃಹಬಳಕೆ ಗ್ರಾಹಕರಿಗೆ ಇಂದಿನಿಂದ ಶೂನ್ಯ ಬಿಲ್ ವಿತರಣೆ ಶುರುವಾಗಲಿದೆ. ಜುಲೈ 1 ರಿಂದ ಬಳಕೆಯಾದ ಗೃಹಬಳಕೆ ವಿದ್ಯುತ್ ಗೆ ಗ್ರಾಹಕರು ಕಳೆದ ಒಂದು ವ?ದ ಸರಾಸರಿ ವಿದ್ಯುತ್ ಬಳಕೆ ಆಧರಿಸಿ ಅದಕ್ಕಿಂತ ಶೇಕಡ 10ರ?ï ಹೆಚ್ಚಿನ ವಿದ್ಯುತ್ ಉಚಿತವಾಗಿ ಪಡೆದುಕೊಳ್ಳಬಹುದು. ಜುಲೈ 27ರೊಳಗೆ ನೋಂದಾಯಿಸಿದ ಗ್ರಾಹಕರಿಗೆ ಈ ಸೌಲಭ್ಯ ಸಿಗಲಿದೆ.

ಜೂನ್ ತಿಂಗಳಿನ ವಿದ್ಯುತ್ ಬಿಲ್ ನಲ್ಲಿ ಜುಲೈ ತಿಂಗಳ ಕೆಲವು ದಿನಗಳ ಶುಲ್ಕ ಕೂಡ ಸೇರ್ಪಡೆಯಾಗಿದ್ದರೆ ಹೆಚ್ಚುವರಿ ದಿನಗಳ ಹಣ ನಿಮಗೆ ಮರುಪಾವತಿಯಾಗಲಿದೆ ಎಂದರು. ಜೂನ್ ತಿಂಗಳ ವಿದ್ಯುತ್ ಬಿಲ್ನಲ್ಲಿ ಸ್ವಲ್ಪ ಗೊಂದಲಗಳಿತ್ತು. ಆ ತಿಂಗಳ ಬಿಲ್ನಲ್ಲಿ ಜುಲೈ ತಿಂಗಳ ಕೆಲವು ದಿನಗಳು ಸೇರಿಕೊಂಡಿವೆ. ಅಂತಹ ಗ್ರಾಹಕರಿಗೆ ಕ್ರೆಡಿಟ್ ಕೊಡುತ್ತೇವೆ. ಬಾಕಿ ಮೊತ್ತ ಇಲ್ಲದಿದ್ದರೆ ನಾಲ್ಕು ತಿಂಗಳ ಬಳಿಕ ಹಣ ಹಿಂದಿರುಗಿಸುತ್ತೇವೆ ಎಂದು ಹೇಳಿದ್ದಾರೆ.

# ಮೊಬೈಲ್ ಚಿತ್ರೀಕರಣ ಪ್ರಕರಣ ಎಸ್.ಐ.ಟಿಗೆ ತನಿಖೆಗೆ ವಹಿಸಲ್ಲ

ನಮ್ಮ ಜನ ವಾರ್ತೆ
**ಮಂಗಳೂರು** : ಉಡುಪಿ ಕಾಲೇಜೊಂದರಲ್ಲಿ ಮೊಬೈಲ್ ಚಿತ್ರೀಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಸ್ಯೂ ಮೋಟೋ ಪ್ರಕರಣವನ್ನು ದಾಖಲಿಸಿ ಕೊಂಡಿದ್ದು ಎಫ್ ಐ ಆರ್ ಆಗಿದೆ. ತನಿಖೆಯನ್ನು ಡಿ ವೈಎಸ್ಪಿ ಮಟ್ಟದ ಅಧಿಕಾರಿ ಮಾಡುತ್ತಿದ್ದು, ಪ್ರಕರಣವನ್ನು ಎಸ್.ಐ.ಟಿಗೆ ವಹಿಸುವ ಪ್ರಶ್ನೆ ಉದ್ಭವವಾಗುವುದಿಲ್ಲ ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಅವರು ಇಂದು ಮಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಕೇಂದ್ರ ಮಹಿಳಾ ಆಯೋಗದ ಸದಸ್ಯರು ಆಗಮಿಸಿ ತನಿಖೆ ಕೈಗೊಂಡು ಕಾಲೇಜಿನ ಶೌಚಾಲಯದಲ್ಲಿ ಕ್ಯಾಮರಾ ಇರಲಿಲ್ಲ ಎಂದು ಹೇಳಿದ್ದಾರೆ. ತನಿಖೆಯಾಗಿ ವರದಿ ಬಂದ ನಂತರ ಕ್ರಮ ಕೈಗೊಳ್ಳಲಾಗುವುದು ಎಂದರು.

ಗೃಹ ಸಚಿವರು ಈ ಪ್ರಕರಣವನ್ನು ಮಕ್ಕಳಾಟಿಕೆ ಎಂದಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಮಕ್ಕಳಾಟಿಕೆ ಯಾಗಿದಿದ್ದರೆ ಪ್ರಕರಣ ದಾಖಲಾಗುತ್ತಿತ್ತೆ ಎಂದರು. ಕಾಲೇಜಿನ ವಿದ್ಯಾರ್ಥಿಗಳು ತಮಾಷೆ ಮಾಡಿರಬಹುದು ಎಂದಿರಬಹುದು. ಆದರೆ ಪ್ರಕರಣ ದಾಖಲಾಗಿದ್ದು, ಎಫ್. ಐ.ಆರ್. ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ ಎಂದರು. ಡಿವೈಎಸ್ಪಿ ಮಟ್ಟದ ಅಧಿಕಾರಿ ತನಿಖೆ ನಡೆಸುತ್ತಿದ್ದಾರೆ ಎಂದ ಮೇಲೆ ಪ್ರಕರಣವನ್ನು ಎಸ್.ಐ.ಟಿಗೆ ವಹಿಸುವ ಪ್ರಶ್ನೆ ಉದ್ಭವವಾಗುವುದಿಲ್ಲ ಎಂದರು.

**ಪ್ರಗತಿ ಪರಿಶೀಲನೆ** : ಕರಾವಳಿ ಭಾಗ–ಕ್ಕೆ ನೀಡಿರುವ ಸೌಲಭ್ಯಗಳನ್ನು ಬಜೆಟ್ ನಲ್ಲಿ ತಿಳಿಸಲಾಗಿದೆ. ಜುಲೈ ತಿಂಗಳಲ್ಲಿ ಉಡುಪಿ, ಮಂಗಳೂರು, ಕರಾವಳಿ ಪ್ರದೇಶದಲ್ಲಿ ಮಳೆಯಾಗಿದ್ದು, ಹಾನಿಯಾಗಿರುವ ಪ್ರದೇಶಗಳನ್ನು ವೀಕ್ಷಿಸಲು ಹಾಗೂ ಪ್ರಗತಿ ಪರಿಶೀಲನಾ ಸಭೆ ನಡೆಸಲು ಆಗಮಿಸಿರುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

4ನೇ ಪುಟಕ್ಕೆ




ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ

## ಫಾಸ್ಟ್ ನ್ಯೂಸ್

### ಉಡುಪಿಯ ಬನ್ನಂಜೆಯಲ್ಲಿರುವ ಸರ್ಕಾರಿ ಹಾಸ್ಟೆಲ್ ? ವಿದ್ಯಾರ್ಥಿನಿಯರ ಜೊತೆ ಸಿಎಂ ಮಾತುಕತೆ

ಉಡುಪಿಯ ಬನ್ನಂಜೆಯಲ್ಲಿರುವ ಸರ್ಕಾರಿ ಹಾಸ್ಟೆಲ್?ಗೆ ಸಿಎಂ ಸಿದ್ದರಾಮಯ್ಯ ಭೇಟಿ ನೀಡಿದ್ದು ವಿದ್ಯಾರ್ಥಿನಿಯರ ಜೊತೆ ಮಾತುಕತೆ ನಡೆಸಿದರು. ಗೃಹಲಕ್ಷ್ಮೀ ಯೋಜನೆ ಬಗ್ಗೆ ವಿದ್ಯಾರ್ಥಿನಿಯರ ಜೊತೆ ಮಾತನಾಡಿದರು. ನಿನಗೆ ಹಣ ಸಿಗಲ್ಲ, ನಿನ್ನ ಅಮ್ಮನಿಗೆ ಹಣ ಸಿಗುತ್ತೆ. ಡಿಗ್ರಿ ಪಾಸಾದ ಮೇಲೆ ಕೆಲಸ ಸಿಗುವ ತನಕ ಯುವನಿಧಿ ನೀಡ್ತೇವೆ. ನಿಮ್ಮ ಭವಿ?ಕ್ಕೆ ಒಳ್ಳೆಯದಾಗಲಿ ಎಂದು ವಿದ್ಯಾರ್ಥಿನಿಯರಿಗೆ ಶುಭ ಹಾರೈಸಿದರು.

### ಹಾಸನದಲ್ಲಿ ಮಳೆಯಿಂದಾಗಿ ಕುಸಿದು ಬಿದ್ದ ಶಾಲಾ ಕಟ್ಟಡದ ಮೇಲ್ಛಾವಣಿ

ಹಾಸನ ಜಿಲ್ಲೆ ಬೇಲೂರು ತಾಲ್ಲೂಕಿನ ಮತಿಘಟ್ಟ ಗ್ರಾಮದಲ್ಲಿ ಮಳೆಯಿಂದಾಗಿ ಶಾಲಾ ಕಟ್ಟಡದ ಮೇಲ್ಛಾವಣಿ ಕುಸಿದು ಬಿದ್ದಿದೆ. ಕಟ್ಟಡ ದುರಸ್ತಿ ಮಾಡದೆ ಮಕ್ಕಳನ್ನು ಹೊರಗೆ ಕೂರಿಸಿ ಪಾಠ ಮಾಡಲಾಗುತ್ತಿದೆ. ಕಟ್ಟಡ ದುರಸ್ತಿಗೆ ಆಗ್ರಹಿಸಿ ಶಾಲೆ ಎದುರು ಪೋ?ಕರು ಪ್ರತಿಭಟನೆ ನಡೆಸುತ್ತಿದ್ದಾರೆ. ಶಾಲೆಯಲ್ಲಿ ಕಲಿಯುತ್ತಿರುವ 40 ಮಕ್ಕಳು ನಿತ್ಯ ಆತಂಕದಲ್ಲಿ ವಿದ್ಯಾಭ್ಯಾಸ ಕಲಿಯುತ್ತಿದ್ದಾರೆ.

### ಆ.5ರಂದು ಕಲಬುರಗಿಯಲ್ಲಿ ಗೃಹಜ್ಯೋತಿ ಉದ್ಘಾಟನಾ ಸಮಾರಂಭ

ಆ.5ರಂದು ಕಲಬುರಗಿಯಲ್ಲಿ ಗೃಹಜ್ಯೋತಿ ಉದ್ಘಾಟನಾ ಸಮಾರಂಭ ಸಂಬಂಧ ಬೆಂಗಳೂರಿನಲ್ಲಿ ಇಂಧನ ಇಲಾಖೆ ಸಚಿವ ಕೆ.ಜೆ.ಜಾರ್ಜ್ ಮಾತನಾಡಿದ್ದಾರೆ. 'ಗೃಹಜ್ಯೋತಿ' ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆ. ಉದ್ಘಾಟನಾ ಕಾರ್ಯಕ್ರಮದಲ್ಲಿ ಂಖಅಅ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್?, ಪ್ರಿಯಾಂಕ್ ಖರ್ಗೆ ಸೇರಿ ಹಲವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ತಾರೆ. ಗೃಹಜ್ಯೋತಿ ಯೋಜನೆಗೆ 1.43 ಕೋಟಿ ಗ್ರಾಹಕರು ಅರ್ಜಿ ಸಲ್ಲಿಸಿದ್ದಾರೆ. 200 ಯೂನಿಟ್?ಯೊಳಗೆ ವಿದ್ಯುತ್? ಬಳಸಿದ್ರೆ ಬಿಲ್ ಪಾವತಿಸುವಂತಿಲ್ಲ. ಒಂದು ವ?ದ ಸರಾಸರಿ ವಿದ್ಯುತ್ ಬಿಲ್ ಪರಿಗಣಿಸಿ ಉಚಿತ ವಿದ್ಯುತ್? ನೀಡಲಾಗುತ್ತೆ. 200 ಯೂನಿಟ್?ನಿಂತ ಹೆಚ್ಚು ಬಳಸಿದರೆ ಅರ್ಜಿ ರಿಜೆಕ್ಟ್ ಆಗಲಿದೆ ಎಂದರು.

### ದೆಹಲಿಗೆ ಹೊರಟ ಡಿಸಿಎಂ ಡಿಕೆ ಶಿವಕುಮಾರ್

ಲೋಕಸಭೆ ಚುನಾವಣೆ ಬಗ್ಗೆ ದೆಹಲಿಯಲ್ಲಿ ಸಭೆ ನಡೆ-ಯುತ್ತಿದೆ. ನಮ್ಮ ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪುತ್ತಿದೆಯಾ ? ಗ್ಯಾರಂಟಿ ಯೋಜನೆಗಳ ಬಗ್ಗೆಯೂ ಚರ್ಚೆ ಮಾಡ್ತೇವೆ. ಸಭೆಗೆ ಹಿರಿಯ ನಾಯಕರು, ಸಂಸದರು, ಶಾಸಕರಿಗೂ ಆಹ್ವಾನಿಸಲಾಗಿದೆ. ಮೂರು ಹಂತದಲ್ಲಿ ಚರ್ಚೆಯಾಗಲಿದೆ. ದೆಹಲಿ ಭೇಟಿ ವೇಳೆ ಕೇಂದ್ರ ಸಚಿವರನ್ನೂ ಭೇಟಿ ಮಾಡುತ್ತೇವೆ ಎಂದು ಬೆಂಗಳೂರಿನಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

### ಕಲುಷಿತ ನೀರು ಸೇವಿಸಿ ಅಸ್ವಸ್ಥ : ಅಧಿಕಾರಿ ಅಮಾನತು

ಬೀದರ್‌ನಲ್ಲಿ ಕಲುಷಿತ ನೀರು ಸೇವಿಸಿ 21 ಜನ ಅಸ್ವಸ್ಥ ಪ್ರಕರಣಕ್ಕೆ ಸಂಬಂಧಿಸಿ ಬೀದರ್ ತಾ.ಪಂ. ಇಒ ಮಾಣಿಕ್ ರಾವ್ ಪಾಟೀಲ್ ಅವರನ್ನು ಅಮಾನತು ಮಾಡಿ ಆದೇಶ ಹೊರಡಿಸಲಾಗಿದೆ. ಕಲುಷಿತ ನೀರು ಸೇವನೆ ಪ್ರಕರಣ ಬಗ್ಗೆ ಸ್ಥಳಕ್ಕೆ ಭೇಟಿ ನೀಡಿದ ಅಧಿಕಾರಿಗಳಿಗೆ ವರದಿ ನೀಡದ ಆರೋಪ ಹಿನ್ನೆಲೆ ಅಮಾನತು ಮಾಡಲಾಗಿದೆ.

### ಸಿ.ಟಿ.ರವಿಗೆ ಬಿಜೆಪಿ ಹೈಕಮಾಂಡ್ ಬುಲಾವ್

ಮಾಜಿ ಶಾಸಕ ಸಿ.ಟಿ.ರವಿಗೆ ಬಿಜೆಪಿ ಹೈಕಮಾಂಡ್? ಬುಲಾವ್ ಕೊಟ್ಟಿದ್ದು ಬಿಜೆಪಿ ನಾಯಕ ಸಿ.ಟಿ.ರವಿ ಇಂದು ನವದೆಹಲಿಗೆ ತೆರಳಲಿ ದ್ದಾರೆ. ಚಿಕ್ಕಮಗಳೂರಿನಿಂದ ಬೆಂಗಳೂರಿಗೆ ಪ್ರಯಾಣ ಬೆಳೆಸಿದ್ದಾರೆ. ಮಧ್ಯಾಹ್ನ 3 ಗಂಟೆಗೆ ಕೆಂಪೇಗೌಡ ಏರ್‌ಪೋರ್ಟ್‌ನಿಂದ ದೆಹಲಿಯತ್ತ ಹಾರಲಿದ್ದಾರೆ.

### ವಿದ್ಯುತ್ ವ್ಯತ್ಯಯ

**ದಾವಣಗೆರೆ :** ನಗರ ಉಪವಿಭಾಗ-2 ರ ವ್ಯಾಪ್ತಿಯ 66/11ಕೆವಿ ದಾವಣಗೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ದುರ್ಗಾಂಬಿಕ ಮಾರ್ಗದ ವ್ಯಾಪ್ತಿಯಲ್ಲಿ ದಾವಣಗೆರೆ ಸ್ಮಾರ್ಟ್‌ಸಿಟಿ ಯೋಜನೆಯಡಿಯಲ್ಲಿ ಕಾಮಗಾರಿಯನ್ನು ನಿರ್ವಹಿಸಬೇಕಾಗಿರುವುದರಿಂದ ಆಗಸ್ಟ್ 3 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ಎಂ.ಬಿ ಕೇರಿ, ಹೊಂಡದ ಸರ್ಕಲ್ ಸುತ್ತಮುತ್ತ, ಕಾಯಿಪೇಟೆ, ಜಾಲಿನಗರ, ಟೀಚರ್ ಕಾಲೋನಿ, ಶಿವಾಜಿ ನಗರ, ಶಿವಾಜಿ ಸರ್ಕಲ್, ಚಲುವಾದಿ ಕೇರಿ, ಇಡಬ್ಲ್ಯೂಎಸ್ ಕಾಲೋನಿ, ಹಳೇಪೇಟೆ, ಬಾರ್ಲೈನ್‌ರಸ್ತೆ, ಹಾಗೂ ಇತರೆ ಪ್ರದೇಶಗಳಲ್ಲಿ ವಿದ್ಯುತ್ ಇರುವುದಿಲ್ಲ ಎಂದು ಬೆಸ್ಕಾಂ ಪ್ರಕಟಣೆ ತಿಳಿಸಿದೆ.

# ನಿರುದ್ಯೋಗ ಸಮಸ್ಯೆ ನಿವಾರಣೆಗೆ ಜಿಟಿಟಿಸಿ ಕೇಂದ್ರ ಮದ್ದು : ಶಾಸಕ ರಘುಮೂರ್ತಿ

**ಚಳ್ಳಕೆರೆ :** ನಗರದ ಬಳ್ಳಾರಿ ರಸ್ತೆಯಲ್ಲಿ ಕಳೆದ 2021ರಲ್ಲಿ ಆರಂಭವಾದ ಜಿಟಿಟಿಸಿ ತರಬೇತಿ ಕೇಂದ್ರ ತನ್ನ ಮೂರನೇ ವರ್ಷದ ತರಬೇತಿಯನ್ನು ಆರಂಭಿಸಿ ಒಟ್ಟು 120 ವಿದ್ಯಾರ್ಥಿಗಳು ದಾಖಲಾಗಿ ಶಿಕ್ಷಣ ಪಡೆಯುತ್ತಿದ್ದಾರೆ. ತರಬೇತಿ ನಂತರ ಉದ್ಯೋಗಾವಕಾಶಗಳು ಸಹ ಸಿಗುವ ಲಕ್ಷ್ಮಣಳಿವೆ, ತರಬೇತಿಗೆ ದಾಖಲಾದ ಎಲ್ಲಾ ವಿದ್ಯಾರ್ಥಿಗಳು ಹೆಚ್ಚು ಜವಾಬ್ದಾರಿಯಿಂದ ಕಲಿಕೆಯನ್ನು ಮುಂದುವರೆಸಬೇಕು ಎಂದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಸೋಮವಾರ ಜಿಟಿಟಿಸಿ ಕೇಂದ್ರದಲ್ಲಿ ಮೂರನೇ ವರ್ಷದ ವಿದ್ಯಾರ್ಥಿಗಳ ತರಬೇತಿ ಕಾರ್ಯಗಾರವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಜಿಟಿಟಿಸಿ ಕೇಂದ್ರ ಆರಂಭವಾಗಿ ಮೂರು ವರ್ಷಗಳು ಕಳೆದಿದ್ದು, ಈಗಾಗಲೇ 240ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ಕೇಂದ್ರದಲ್ಲಿ ಉತ್ತಮ ತರಬೇತಿ ಪಡೆದಿದ್ದಾರೆ. ನಗರ ಹಾಗೂ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಉದ್ಯೋಗವನ್ನು ಒದಗಿಸುವ ಎಲ್ಲಾ ತಾಂತ್ರಿಕ ತರಬೇತಿ ನೀಡಲಾಗುತ್ತದೆ. ಯುವಕರಿಗೆ ನಿರುದ್ಯೋಗ ಸಮಸ್ಯೆಯಿಂದ ಹೊರಬರಲು ಈ ಕೇಂದ್ರ ಪ್ರಾರಂಭಿಸಿದ್ದು, ಇದರ ಸದುಪಯೋಗ ಉತ್ತಮ ಮಟ್ಟದಲ್ಲಿ ಆಗಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ತಿಪ್ಪೇಸ್ವಾಮಿ ಮಾತನಾಡಿ, ವಾಣಿಜ್ಯ ಕೇಂದ್ರವಾದ ಚಳ್ಳಕೆರೆ ನಗರದಲ್ಲಿ ಉದ್ಯೋಗದ ಪರ್ವ ಆರಂಭಿಸಲು ಶಾಸಕ ಟಿ.ರಘುಮೂರ್ತಿಯವರ ಶತಪ್ರಯತ್ನದಿಂದ ಕೇಂದ್ರ ಆರಂಭವಾಗಿ ಮೂರನೇ ವರ್ಷದ ತರಬೇತಿಯನ್ನೂ ಸಹ ಪ್ರಾರಂಭಿಸಲಾಗಿದೆ. ತರಬೇತಿ ಅವಧಿಯಲ್ಲಿ ಎಲ್ಲಾ ವಿದ್ಯಾರ್ಥಿಗಳು ಬೋಧಕರು ನೀಡುವ ಎಲ್ಲಾ ಅಂಶವನ್ನು ಗಮನವಿಟ್ಟು ಕೇಳಬೇಕು. ಜಿಟಿಟಿಸಿ ಕೇಂದ್ರ ಹೆಚ್ಚಿನ ತಾಂತ್ರಿಕತೆಯಿಂದ ಕೂಡಿದ್ದು ಇದು ತರಬೇತಿ ಪಡೆಯುವವರಿಗೆ ಹೆಚ್ಚು



ಚಳ್ಳಕೆರೆ ನಗರದ ಜಿಟಿಟಿಸಿ ಕೇಂದ್ರದಲ್ಲಿ ಮೂರನೇ ವರ್ಷದ ವಿದ್ಯಾರ್ಥಿಗಳ ತರಬೇತಿ ಕಾರ್ಯಗಾರವನ್ನು ಶಾಸಕ ಟಿ.ರಘುಮೂರ್ತಿ ಉದ್ಘಾಟಿಸಿದರು.

ಉಪಯುಕ್ತವಾಗಲಿದೆ ಎಂದರು. ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಜೆ.ರಾಘವೇಂದ್ರ ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಈ ಭಾಗದ ಜಮೀನುಗಳು ಕೈಗಾರಿಕೆಗೆ ಯೋಗ್ಯವಾದುದಲ್ಲ

**ಚಿತ್ರದುರ್ಗ :** ಹಿರಿಯೂರು ತಾಲ್ಲೂಕಿನ ಕರಿಯೋಬನಹಳ್ಳಿ ಮೇಟಿಕುರ್ಕೆ ಗ್ರಾಮಗಳ ಸುತ್ತಮುತ್ತ 1156 ಎಕರೆ ಪ್ರದೇಶವನ್ನು ಕೈಗಾರಿಕಾ ಪ್ರದೇಶವನ್ನಾಗಿ ಅಭಿವೃದ್ಧಿಪಡಿಸಲು ದಿನಾಂಕ : 14.12.2022 ರಂದು ಸರ್ಕಾರ ರಾಜ್ಯಪತ್ರ ಹೊರಡಿಸಿದ್ದು, ಈ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್ ಈ ಭಾಗದ ಜಮೀನುಗಳು ಕೈಗಾರಿಕೆಗೆ ಯೋಗ್ಯವಾದುದಲ್ಲ. ಇಲ್ಲಿ ರಿಯಲ್ ಎಸ್ಟೇಟ್ ದಂಧೆ ನಡೆಯುತ್ತಿದೆ ಎಂದು ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿರುವುದು ಸರಿಯಲ್ಲ. ನಮಗೆ ಪೂರಕವಾಗಿ ಸ್ಪಂದಿಸಿ ಬರೆದಿರುವ ಪತ್ರವನ್ನು ಹಿಂದಕ್ಕೆ ಪಡೆಯಬೇಕು. ಇಲ್ಲವಾದಲ್ಲಿ ಉಗ್ರ ಹೋರಾಟ ನಡೆಸಲಾಗುವುದೆಂದು ಕಲ್ಯಾಣ ರಾಜ್ಯ ಪ್ರಗತಿ ಪಕ್ಷ ಹಿರಿಯೂರು ತಾಲ್ಲೂಕು ಅಧ್ಯಕ್ಷ ಶಂಕರಪ್ಪ ಎಚ್ಚರಿಸಿದರು.

ಪತ್ರಕರ್ತರ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ದಾವಣಗೆರೆ ಭೂಸ್ವಾಧೀನ ಕಚೇರಿಯವರು ಕರಿಯೋಬನಹಳ್ಳಿ ಹಾಗೂ ಮೇಟಿಕುರ್ಕೆ ಭಾಗದ ರೈತರಿಗೆ ಹಲವಾರು ಸಲ ನೋಟಿಸ್ ನೀಡಿ ಜಿಲ್ಲಾಧಿಕಾರಿ ಸಮ್ಮುಖದಲ್ಲಿ ಸಭೆ ನಡೆಸಿ ಪರಿಹಾರ ವಿಚಾರವಾಗಿ ಪ್ರಸ್ತಾಪಿಸಿ ಒಂದು ಎಕರೆಗೆ 35-45 ಲಕ್ಷ ನೀಡುವುದಾಗಿ ತೀರ್ಮಾನಿಸಿದರು. ಆದರೆ ನಮ್ಮದು ಫಲವತ್ತಾದ ಭೂಮಿ ಕೈಗಾರಿಕಾ ಪ್ರದೇಶಕ್ಕೆ ಯೋಗ್ಯವಾಗಿರುವುದರಿಂದ ಎಕರೆಗೆ ಒಂದು ಕೋಟಿ ರೂ.ಗಳನ್ನು ನೀಡಬೇಕೆಂಬ ಬೇಡಿಕೆ ಇಟ್ಟಿದ್ದೇವೆ. ದಿನಾಂಕ: 7-7-2023 ರಂದು ಮೊದಲನೆ ಕಂತು ಪರಿಹಾರದ ಹಣ ನೂರು ಕೋಟಿ ರೂ.ಗಳ ಬಿಡುಗಡೆಯಾಗಿದೆ. ಇಷ್ಟೆಲ್ಲಾ ನಡೆದಾಗ ಜಿಲ್ಲಾ ಉಸ್ತುವಾರಿ ಸಚಿವರು ಕೈಗಾರಿಕಾ ಪ್ರದೇಶಕ್ಕೆ ಭೂಮಿ ಯೋಗ್ಯವಾಗಿಲ್ಲವೆಂದು ಪತ್ರ ಬರೆದಿರುವುದು ಏಕೆ ಎನ್ನುವುದು ನಮಗೂ ನಾನಾ ರೀತಿಯ ಅನುಮಾನಗಳಿಗೆ ಕಾರಣವಾಗಿದೆ. ಈಗಾಗಲೆ ಹಿರಿಯೂರು ತಾಲ್ಲೂಕಿನಲ್ಲಿ ಮೂರು ಕೈಗಾರಿಕೆಗಳು ಆರಂಭವಾಗಿ ಯಶಸ್ವಿಯಾಗಿ ನಡೆಯುತ್ತಿದೆ. ತೀರಾ ಹಿಂದುಳಿದ ತಾಲ್ಲೂಕು ಹಿರಿಯೂರಿನಲ್ಲಿ ಕೈಗಾರಿಕಾ ಪ್ರದೇಶ ಅಭಿವೃದ್ಧಿಯಾದರೆ ನಿರುದ್ಯೋಗಿಗಳಿಗೆ ಕೆಲಸ ಸಿಗುತ್ತದೆ. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಟೆಂಡರ್ ಕೂಡ ಕರೆದಿದ್ದು, ಕೈಗಾರಿಕಾ ಬಡಾವಣೆ ಪ್ರಕ್ರಿಯೇ ಆರಂಭಗೊಂಡಿದೆ. ಪರಿಸ್ಥಿತಿ ಹೀಗಿರುವಾಗ ಜಿಲ್ಲಾ ಉಸ್ತುವಾರಿ ಸಚಿವರು ಪತ್ರ ಬರೆದಿರುವುದು ನಮಗೆಲ್ಲಾ ಅಸಮಾಧಾನವಾಗಿದೆ. ಕೂಡಲೆ ಹಿಂದಕ್ಕೆ ಪಡೆದು ಮೇಟಿಕುರ್ಕೆ ಹಾಗೂ ಕರಿಯೋಬನಹಳ್ಳಿ ಗ್ರಾಮದ ರೈತ ಹಿತ ಕಾಪಾಡುವಲ್ಲಿ ಮುಂದಾಗಲಿ ಎಂದು ಶಂಕರಪ್ಪ ಮನವಿ ಮಾಡಿದರು.

ವೀರೇಂದ್ರಸ್ವಾಮಿ, ಮಹೇಶ್, ಬಸವರಾಜನಾಯ್ಕ, ಬಿ.ಟಿ.ತಿಪ್ಪೇಸ್ವಾಮಿ, ಟಿ.ಎನ್.ರಾಜು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.



ಮೇಟಿಕುರ್ಕೆ ಮತ್ತು ಕರಿಯೋಬನಹಳ್ಳಿ ಗ್ರಾಮಗಳ ಸುತ್ತಮುತ್ತ 1156 ಎಕರೆ ಜಮೀನು ಕೈಗಾರಿಕಾ ಪ್ರದೇಶವನ್ನಾಗಿ ಅಭಿವೃದ್ಧಿಪಡಿಸುವ ವಿಚಾರಕ್ಕೆ ಸಂಬಂಧಿಸಿದಂತೆ ಶಂಕರಪ್ಪ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

# ಕಾಂಗ್ರೆಸ್ ನಗರ ಬ್ಲಾಕ್ ಅಧ್ಯಕ್ಷರಾಗಿ ಎ.ಹರೀಶ್ ನೇಮಕ



ಜಿಲ್ಲಾ ಕಾಂಗ್ರೆಸ್ ಅಸಂಘಟಿತ ಕಾರ್ಮಿಕ ವಿಭಾಗದ ನಗರ ಬ್ಲಾಕ್ ಅಧ್ಯಕ್ಷರಾಗಿ ಎ.ಹರೀಶ್ ನೇಮಕ.

**ಚಿತ್ರದುರ್ಗ :** ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಸಂಘಟಿತ ಕಾರ್ಮಿಕ ವಿಭಾಗದ ರಾಜ್ಯಾಧ್ಯಕ್ಷ ಜಿ.ಎಸ್. ಮಂಜುನಾಥ್‌ರವರ ಆದೇಶದಂತೆ ಜಿಲ್ಲಾ ಕಾಂಗ್ರೆಸ್ ಅಸಂಘಟಿತ ಕಾರ್ಮಿಕ ವಿಭಾಗದ ನಗರ ಬ್ಲಾಕ್ ಅಧ್ಯಕ್ಷರಾಗಿ ನೇಮಕಗೊಂಡಿರುವ ಇಲ್ಲಿನ ಬುದ್ದ ನಗರದ ಎ.ಹರೀಶ್‌ಗೆ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ನೇಮಕ ಪತ್ರ ನೀಡಲಾಯಿತು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್‌ಪೀರ್ ಎ.ಹರೀಶ್‌ಗೆ ನೇಮಕ ಪತ್ರ ವಿತರಿಸಿ ಮಾತನಾಡುತ್ತ ಪಕ್ಷದಲ್ಲಿ ಯಾವುದೇ ಹುದ್ದೆ ಪಡೆಯುವುದು ಮುಖ್ಯವಲ್ಲ. ಸಿಕ್ಕಿರುವ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿಭಾಯಿಸಿ ಪಕ್ಷ ಸಂಘಟನೆಯಲ್ಲಿ ತೊಡಗಬೇಕು. ವಿಧಾನಸಭೆ ಚುನಾವಣೆಯಲ್ಲಿ ರಾಜ್ಯದ ಜನ ಕಾಂಗ್ರೆಸ್ ಮೇಲೆ ನಂಬಿಕೆಯಿಟ್ಟು ಸ್ಪಷ್ಟ ಬಹುಮತ ನೀಡಿದ್ದಾರೆ. ಮುಂದೆ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಲೋಕಸಭೆ ಚುನಾವಣೆ ಎದುರಾಗಲಿದೆ. ಈ ನಿಟ್ಟಿನಲ್ಲಿ ಕಾಂಗ್ರೆಸ್ ಅಸಂಘಟಿತ ಕಾರ್ಮಿಕ ವಿಭಾಗವನ್ನು ಸಂಘಟಿಸುವತ್ತ ಹೆಚ್ಚು ಗಮನ ಕೊಡಬೇಕೆಂದು ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ, ಅಸಂಘಟಿತ ಕಾರ್ಮಿಕ ವಿಭಾಗದ ಜಿಲ್ಲಾಧ್ಯಕ್ಷ ಎಸ್.ಎನ್.ಮೋಹನ್ ಪೂಜಾರಿ, ನಗರ ಯುವ ಕಾಂಗ್ರೆಸ್ ಅಧ್ಯಕ್ಷ ಯೂಸೂಫ್, ಸಾಧಿಕ್ ಪಂಡಿತ್, ಕಿರಣ್‌ಕುಮಾರ್ ಯಾದವ್, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಡಾ.ಟಿಪ್ಪುಖಾಸಿಂ ಆಲಿ, ಜಮೀರ್, ಅನೀಲ್ ಇನ್ನು ಅನೇಕರು ಈ ಸಂದರ್ಭದಲ್ಲಿ ಹಾಜರಿದ್ದರು.


# ಅಗತ್ಯ ವಸ್ತುಗಳ ಬೆಲೆ ಜೊತೆಗೆ ಕಟ್ಟಡ ಸಾಮಗ್ರಿ ದುಬಾರಿ

**ಬೆಂಗಳೂರು :** ಅಗತ್ಯ ವಸ್ತುಗಳ ಬೆಲೆಯಿಂದ ನಲುಗಿರುವ ಜನರಿಗೆ ಇದೀಗ ಗೃಹ ಹಾಗೂ ಇತರೆ ಕಟ್ಟಡ ನಿರ್ಮಾಣಕ್ಕೆ ಅಗತ್ಯವಿರುವ ಕಚ್ಚಾವಸ್ತುಗಳ ಬೆಲೆ ಏರಿಕೆಯಾಗುತ್ತಿರುವುದು ಗ್ರಾಹಕ ಜೇಬಿಗೆ ಕತ್ತರಿ ಬಿದ್ದಿದೆ.

ಇಂದಿನಿಂದ ಮರಳು, ಜಲ್ಲಿ, ಗ್ರಾನೈಟ್ ಕಬ್ಬಿಣ ಬೆಲೆ ಮತ್ತ?ಷ್ಟು ದುಬಾರಿಯಾಗಿದೆ. ಇದರೊಂದಿಗೆ ಹೊಸ ಮನೆ ಕಟ್ಟಬೇಕೆಂಬ ಕನಸು ಕಾಣುತ್ತಿದ್ದವರಿಗೆ ದರ ಏರಿಕೆ ಹೊಡೆತ ಬಿದ್ದಿದೆ.

ಬೆಲೆ ಏರಿಕೆಯಿಂದ ಮನೆ ಕಟ್ಟುವವರು ಕಂಗಾಲಾಗಿದ್ದಾರೆ. ದಿನಸಿ, ಹಾಲು-ತರಕಾರಿ ಸೇರಿದಂತೆ ದಿನ ಬಳಕೆ ವಸ್ತುಗಳ ಬೆಲೆ ಏರಿಕೆಯಿಂದ ಜನರು ತತ್ತರಿಸಿದ್ದು. ಕಬ್ಬಿಣ ಜಲ್ಲಿ, ಗ್ರಾನೈಟ್ ಏರಿಕೆಯೂ ಗ್ರಾಹಕರ ಕೈ ಸುಡುತ್ತಿದೆ.

ಮರಳು, ಎಂ-ಸ್ಯಾಂಡ್, ಜಲ್ಲಿಕಲ್ಲು, ಗ್ರಾನೈಟ್ ಬಂಡೆ, ಕಬ್ಬಿಣ ಸೇರಿದಂತೆ ಮನೆ ನಿರ್ಮಾಣದ ಇನ್ನಿತರ ವಸ್ತುಗಳ ಪರಿ?ಕೃತ ಇಂದಿನಿಂದ ದರ ಜಾರಿಗೆ ಬಂದಿದೆ.ಕಳೆದ ಸರ್ಕಾರ ಈ ವ?ಶೇ 10 ರ?ಷ್ಟು ರಾಜಧನ ಏರಿಕೆ ಮಾಡಿತ್ತು. ಹೊಸ ಸರ್ಕಾರ ಕೂಡಾ ಮೊದಲ ಬಜೆಟ್ ನಲ್ಲಿ ರಾಜಸ್ವ ಏರಿಕೆ ಮಾಡಿದ್ದು, ನೇರವಾಗಿ ಜನ ಸಾಮಾನ್ಯರಿಗೆ ಇದರ ಬಿಸಿ ತಟ್ಟಲಿದೆ. ಇದ-ರಿಂದ ಮನೆ ಕಟ್ಟುವ ಕಬ್ಬಿಣ, ಅದಿರು, ಜಲ್ಲಿ ಕಲ್ಲು, ಗ್ರಾನೈಟ್, ಮರಳು, ಎಂ. ಸ್ಯಾಂಡ್ ಸೇರಿದಂತೆ ಇನ್ನಿತರೆ ವಸ್ತುಗಳ ಬೆಲೆ ಇಂದಿನಿಂದ ದುಬಾರಿಯಾಗಲಿದೆ.



# ಸ್ವಾತಂತ್ರ್ಯೋತ್ಸವವನ್ನು ಅರ್ಥಗರ್ಭಿತವಾಗಿ ಆಚರಿಸಿ : ಶಾಸಕ ಟಿ.ರಘುಮೂರ್ತಿ

**ಚಳ್ಳಕೆರೆ :** ರಾಷ್ಟ್ರದ ಅಮೃತ ಮಹೋತ್ಸವದ 76ನೇ ಸ್ವಾತಂತ್ರ್ಯೋತ್ಸವವನ್ನು ಅದ್ದೂರಿ, ಅರ್ಥಗರ್ಬಿತವಾಗಿ ಆಚರಿಸುವಂತೆ ಶಾಸಕ ಟಿ.ರಘುಮೂರ್ತಿ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸ್ವಾತಂತ್ರ್ಯೋತ್ಸವದ ಪೂರ್ವಬಾವಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಕಾರ್ಯಕ್ರಮದಲ್ಲಿ ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ತಪ್ಪದೆ ಭಾಗವಹಿಸಬೇಕು. ಪ್ರತಿಯೊಂದು ಇಲಾಖೆ ಕಾರ್ಯಕ್ರಮದ ಜವಾಬ್ದಾರಿಯನ್ನು ಸಂಪೂರ್ಣವಾಗಿ ನಿಬಾಯಿಸಬೇಕು. ಈ ಹಿನ್ನೆಲೆಯಲ್ಲಿ ತಹಶೀಲ್ದಾರ್ ರೇಹಾನ್ ಪಾಷರವರೊಡನೆ ಅಧಿಕಾರಿಗಳು ಮತ್ತೊಮ್ಮೆ ಮುಕ್ತವಾಗಿ ಚರ್ಚಿಸಿದಿ ಕಾರ್ಯ ಕ್ರಮದ ರೂಪು ರೇಷೆಗಳನ್ನು ಅಂತಿಮಗೊಳಿಸಬೇಕು ಎಂದರು.

ಸ್ವಾತಂತ್ರ್ಯೋತ್ಸವಕ್ಕೆ ಹೋರಾಡಿದ ಮಹಾನೀಯರ ಬಗ್ಗೆ ಸಾರ್ವಜನಿಕರಿಗೆ ಇನ್ನೂ ಹೆಚ್ಚಿನ ವಿಷಯವನ್ನು ತಿಳಿಸುವ ನಿಟ್ಟಿನಲ್ಲಿ ಹೆಚ್ಚು ವಿಚಾರಗಳನ್ನು ಬಲ್ಲಂತಹ ಉಪನ್ಯಾಸವನ್ನು ಏರ್ಪಡಿಸಬೇಕು, ಸರ್ಕಾರಿ ಸೌಲಭ್ಯಗಳು ಮಂಜೂರಾಗಿದ್ದಲ್ಲಿ ಅವರಿಗೆ ಕಾರ್ಯಕ್ರಮದಲ್ಲಿ ಆದೇಶ ಪ್ರತಿ ನೀಡಬೇಕು ಎಂದರು. ಇದೇ ಸಂದರ್ಭದಲ್ಲಿ ಕೃಷಿ, ತೋಟಗಾರಿಕೆ ಸೇರಿದಂತೆ ವಿವಿಧ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಬೆಳೆ ವಿಮೆ, ಬೆಳೆ ನಷ್ಟ ಪರಿಹಾರದ ಬಗ್ಗೆ ಸಭೆ ನಡೆಸಿ ಅಧಿಕಾರಿಗಳು ಹೆಚ್ಚು ಜಾಗೃತಿಯಿಂದ ಕಾರ್ಯನಿರ್ವಹಿಸಬೇಕು ಎಂದರು. ತಹಶೀಲ್ದಾರ್ ರೇಹಾನ್ ಪಾಷ ಮಾತನಾಡಿದರು.



**ಚಳ್ಳಕೆರೆ ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಸ್ವಾತಂತ್ರ್ಯೋತ್ಸವದ ಪೂರ್ವಬಾವಿ ಸಭೆಯಲ್ಲಿ ಶಾಸಕ ಟಿ.ರಘುಮೂರ್ತಿ ಮಾತನಾಡಿದರು.**

## ಫಾಸ್ಟ್ ನ್ಯೂಸ್

### ಎಫ್.ಐ.ಆರ್.ಗೆ ಕಾಡುಗೊಲ್ಲ ಜನಾಂಗದ ಸಿ.ಚಿತ್ತಯ್ಯ ಸ್ವಾಗತ

**ಚಿತ್ರದುರ್ಗ :** ತುಮಕೂರು ತಾಲ್ಲೂಕು ಬೆಳ್ಳಾವಿ ಹೋಬಳಿ ಪಿ.ಗೊಲ್ಲರಹಳ್ಳಿ ಹಟ್ಟಿಯಲ್ಲಿ ಮೌಢ್ಯಕ್ಕೆ ಒಂದು ತಿಂಗಳ ಹೆಣ್ಣು ಮಗು ಬಲಿಯಾಗಿರುವುದಕ್ಕೆ ಬಾಣಂತಿ ವಸಂತ, ಪತಿ ಸಿದ್ದೇಶ್, ಮಾವ ಚಿಕ್ಕಹುಲಿಯಪ್ಪ, ಸಿದ್ದೇಶ್ ಕುಟುಂಬ ಹಾಗೂ ಸಮುದಾಯದ ಕೆಲವು ಮುಖಂಡರ ವಿರುದ್ದ ಕೋರಾ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್. ದಾಖಲಾಗಿರುವುದನ್ನು ನಗರದ ಜೋಗಿಮಟ್ಟಿ ರಸ್ತೆ ನಿವಾಸಿ ಕಾಡುಗೊಲ್ಲ ಜನಾಂಗದ ಸಿ.ಚಿತ್ತಯ್ಯ (ರೇಷ್ಮೆ) ಸ್ವಾಗತಿಸಿದ್ದಾರೆ.

ಹುಟ್ಟು-ಸಾವು, ಮದುವೆ, ಹೆರಿಗೆ, ಹೆಣ್ಣು ಋತುಮತಿಯಾಗುವುದು ಇನ್ನು ಅನೇಕ ಮೂಢನಂಬಿಕೆಗಳನ್ನು ಕಾಡುಗೊಲ್ಲ ಜನಾಂಗ ಇಂದಿಗೂ ಆಚರಿಸಿಕೊಂಡು ಬರುತ್ತಿದೆ. ಈ ಎಲ್ಲಾ ಮೌಢ್ಯಗಳ ವಿರುದ್ದ ಕಾಡುಗೊಲ್ಲ ಜನಾಂಗದ ವಿದ್ಯಾವಂತ ತರುಣರು ಹೋರಾಟ ಮಾಡುತ್ತಿದ್ದಾರೆ. ಚಿತ್ರದೇವರು, ಕಾಟಂ ದೇವರು, ಎತ್ತಪ್ಪ ದೇವರು, ಕರಿಯಮ್ಮ ದೇವತೆ ಇನ್ನು ಇತ್ಯಾದಿ ದೇವರುಗಳ ಪೂಜಾರಿ, ದಾಸಯ್ಯ, ಗೌಡ ಮತ್ತು ಕಟ್ಟೆ ಮನೆಗಳ ಕರಿಓಬನಹಳ್ಳಿ ಕಟ್ಟೆಮನೆ, ರಾಮೇನಹಳ್ಳಿ ಕಟ್ಟೆಮನೆ, ತಾಳವಟ್ಟಿ ಕಟ್ಟೆಮನೆ ಇವುಗಳು ಕಾಡುಗೊಲ್ಲ ಜನಾಂಗದ ಅತಿ ಶ್ರೇಷ್ಠ ನ್ಯಾಯಾಲಯಗಳಾಗಿರುತ್ತವೆ. ಈ ದೇವರು ಮತ್ತು ಕಟ್ಟೆಮನೆಯ ಪೂಜಾರಿಗಳು, ಗೌಡ, ದಾಸಯ್ಯನವರ ತೀರ್ಪು ನ್ಯಾಯಾಲಯದಂತ ತೀರ್ಪಾಗಿರುತ್ತದೆ. ಆದರೆ ಇತ್ತೀಚಿನ ದಿನಮಾನಗಳಲ್ಲಿ ಸಡಿಲಗೊಂಡಿವೆ.

ನಮ್ಮ ಪೂಜಾರಿ, ದಾಸಯ್ಯ, ಗೌಡರು ಹೇಳುವ ಮಾತು ವೇದವಾಕ್ಯ ಅಥವಾ ನಂಬುವುದಾದರೆ ತುಮಕೂರು ತಾಲ್ಲೂಕು ಪಿ.ಗೊಲ್ಲಹಳ್ಳಿಯಲ್ಲಿ ನಡೆದ ಘಟನೆಗೆ ಪೂಜಾರಿ ದಾಸಯ್ಯ ಹಾಗೂ ಗೌಡರುಗಳು ಸಹ ಹೊಣೆಗಾರರಾಗಿರುವುದರಿಂದ ಇವರುಗಳನ್ನು ಸಹ ನ್ಯಾಯಾಂಗದ ವ್ಯಾಪ್ತಿಗೆ ಗುರಿಪಡಿಸಿ ಕಠಿಣ ಶಿಕ್ಷೆಗೆ ಒಳಪಡಿಸಬೇಕೆಂದು ಸಿ.ಚಿತ್ತಯ್ಯ ಕೋರಿದ್ದಾರೆ.

### ಏಕಾಏಕಿ ಡಿಶ್ ದರ ಏರಿಸಿದ ಡಿಶ್ ಮಾಲೀಕರ ವಿರುದ್ದ ಕ್ರಮಕ್ಕೆ ಆಗ್ರಹ

**ಚಳ್ಳಕೆರೆ :** ನಗರದಾದ್ಯಂತ ಸುಮಾರು ನಾಲ್ಕು ಸಾವಿರಕ್ಕೂ ಹೆಚ್ಚು ಜನರು ಡಿಶ್‌ರವರಿಂದ ಸಂಪರ್ಕವನ್ನು ಪಡೆದು ಟಿ.ವಿಯನ್ನು ವೀಕ್ಷಣೆ ಮಾಡುತ್ತಿದ್ದು, ಸಾರ್ವಜನಿಕರಿಗೆ ಮಾಹಿತಿ ನೀಡದೆ ಏಕಾಏಕಿ ಡಿಶ್ ದರಗಳನ್ನು ಹೆಚ್ಚಿಸಿದ್ದು, ಕೂಡಲೇ ದರಗಳ ಕಡಿತದ ಜೊತೆಗೆ ಉತ್ತಮ ಕಾರ್ಯನಿರ್ವಹಣೆಗೆ ಡಿಶ್ ಮಾಲೀಕರಿಗೆ ಸೂಚಿಸಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್‌ಶೆಟ್ಟಿ ಬಣ) ಅಧ್ಯಕ್ಷ ಟಿ.ಮಂಜುನಾಥ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

ಮನವಿ ಸ್ವೀಕರಿಸಿ ಮಾತನಾಡಿದ ಶಿರಸ್ತೇದಾರ್ ಸದಾಶಿವಪ್ಪ, ತಮ್ಮ ಮನವಿಯನ್ನು ಸ್ವೀಕರಿಸಿದ್ದು, ಈ ಬಗ್ಗೆ ಖಾಸಗಿ ಡಿಶ್ ಮಾಲೀಕರೊಂದಿಗೆ ಚರ್ಚಿಸುವ ಭರವಸೆ ನೀಡಿದ್ದಾರೆ.

# ಕ್ರೈಸ್ತ ಸಮುದಾಯದ ಒಕ್ಕೂಟ ಜಿಲ್ಲಾಧಿಕಾರಿಗೆ ಮನವಿ



**ಮಣಿಪುರದಲ್ಲಿ ಕ್ರೈಸ್ತ ಸಮುದಾಯದ ಮೇಲೆ ನಡೆಯುತ್ತಿರುವ ಹಿಂಸೆಯನ್ನು ಖಂಡಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಕ್ರೈಸ್ತ ಸಮುದಾಯದಿಂದ ಪ್ರತಿಭಟನೆ.**

**ಚಿತ್ರದುರ್ಗ :** ಮಣಿಪುರದ ಗುಡ್ಡಗಾಡು ಪ್ರದೇಶಗಳಲ್ಲಿ ಕ್ರೈಸ್ತ ಸಮುದಾಯದ ಮೇಲೆ ನಡೆಯುತ್ತಿರುವ ಹಿಂಸೆಯನ್ನು ಖಂಡಿಸಿ ತಾಲ್ಲೂಕು ಕ್ರೈಸ್ತ ಸಮುದಾಯದ ಒಕ್ಕೂಟದ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ಕೇಂದ್ರ ಗೃಹಮಂತ್ರಿಗೆ ಮನವಿ ಸಲ್ಲಿಸಲಾಯಿತು.

ಕ್ರೈಸ್ತ ಸಮುದಾಯದ ಕುಕ್ಕಿಗಳು ಹಾಗೂ ಮೈತೇಯಿ ಜನಾಂಗಗಳ ನಡುವೆ ಕಳೆದ ಮೂರು ತಿಂಗಳಿನಿಂದಲೂ ಗಲಭೆ ನಡೆಯುತ್ತಿದ್ದು, ಇಬ್ಬರು ಮಹಿಳೆಯರನ್ನು ಬೆತ್ತಲೆಗೊಳಿಸಿ ಮೆರವಣಿಗೆ ನಡೆಸಿರುವುದು ಅತ್ಯಂತ ಹೀನಾಯ ಕೃತ್ಯ. ಮಣಿಪುರ ರಾಜ್ಯ ಸರ್ಕಾರವಾಗಲಿ, ಕೇಂದ್ರವಾಗಲಿ ಗಲಭೆಯನ್ನು ಏಕೆ ನಿಯಂತ್ರಿಸುತ್ತಿಲ್ಲ ಎಂದು ಪ್ರತಿಭಟನಾಕಾರರು ಪ್ರಶ್ನಿಸಿದರು?

ಪ್ರಧಾನಿ ಮೋದಿರವರು ಮಣಿಪುರ ಸರ್ಕಾರದೊಂದಿಗೆ ಮಾತುಕತೆ ನಡೆಸಿ ಶಾಂತಿ ಹಾಗೂ ಕಾನೂನು ಸುವ್ಯವಸ್ಥೆಯನ್ನು ಕಾಪಾಡಿ ಗುಡ್ಡಗಾಡು ಪ್ರದೇಶಗಳಲ್ಲಿ ವಾಸಿಸುತ್ತಿರುವವರಿಗೆ ರಕ್ಷಣೆ ನೀಡಬೇಕು.

ಗಲಭೆ ಪೀಡಿತ ಪ್ರದೇಶಗಳಲ್ಲಿ ಎರಡು ಸಮುದಾಯದ ಮುಖಂಡರ ಜೊತೆ ಮಾತುಕತೆ ನಡೆಸಿ ಸಾಂವಿಧಾನಿಕ ಮಾರ್ಗದಿಂದ ಸಮಸ್ಯೆಗಳನ್ನು ಬಗೆಹರಿಸಬೇಕು.

ಗಲಭೆಯಲ್ಲಿ ಬಲಿಯಾಗಿರುವ ಸಂತ್ರಸ್ತ ಕುಟುಂಬಗಳಿಗೆ ತಲಾ ಹತ್ತು ಲಕ್ಷ ರೂ.ಗಳ ಪರಿಹಾರ ಘೋಷಿಸಿ ಸರ್ಕಾರಿ ನೌಕರಿ ನೀಡಬೇಕು. ಮನೆಗಳನ್ನು ಕಳೆದುಕೊಂಡು ನಿರಾಶ್ರಿತರಾದವರಿಗೆ ಪುನರ್ ವಸತಿ ನಿರ್ಮಿಸಬೇಕು.

ಸಂತ್ರಸ್ಥರ ಜೀವನೋಪಾಯ ಹಾಗೂ ಪುನರ್‌ವಸತಿಗೆ ವಿಶೇಷ ಪ್ಯಾಕೇಜ್‌ಗಳನ್ನು ಘೋಷಿಸಿ ಧ್ವಂಸವಾಗಿರುವ ಚರ್ಚ್‌ಗಳ ನಿರ್ಮಾಣಕ್ಕೆ ಕ್ರಮ ಕೈಗೊಳ್ಳಬೇಕು.

ಕುಕ್ಕಿ, ಮೈತೇಯಿ, ಕ್ರೈಸ್ತ ಅಲ್ಪಸಂಖ್ಯಾತ ಸಂತ್ರಸ್ತರಿಗೆ ಭದ್ರತೆ ಒದಗಿಸಿ ಶಾಂತಿ ನೆಲೆಸುವಂತೆ ಮಣಿಪುರ ರಾಜ್ಯ ಹಾಗೂ ಕೇಂದ್ರ ಸರ್ಕಾರ ಅಗತ್ಯ ಸಿದ್ದತೆಗಳನ್ನು ಮಾಡಿಕೊಳ್ಳಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಹೋಲಿ ಫ್ಯಾಮಿಲಿ ಚರ್ಚ್‌ನ ಫಾದರ್ ಕ್ಲಾರೆನ್ಸ್ ಡಿಸೋಜ, ಡಾನ್‌ಬೋಸ್ಕೋದ ಸಜ್ಜಿ ಫಾದರ್, ಸಿಸ್ಟರ್ ಜೋಸ್ಟಿನ್, ಸಿಸ್ಟರ್ ಈಹೃದಯರಾಣಿ, ಸಿಸ್ಟರ್ ಜಯಶೀಲ, ಬಾಲಮೇರಿ, ಮಾರ್ಟಿನ್ ವಿಜಯ್ ಸೇರಿದಂತೆ ಕ್ರೈಸ್ತ ಸಮುದಾಯದ ನೂರಾರು ಮಂದಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಶಿಕ್ಷಕರ ಕಾರ್ಯ ಎಲ್ಲರಿಗೂ ಮಾದರಿ : ಮಹಲಿಂಗಪ್ಪ

**ಚಳ್ಳಕೆರೆ :** ಶಿಕ್ಷಣ ವೃತ್ತಿ ಅತ್ಯಂತ ಪವಿತ್ರವಾಗಿದ್ದು, ಮಕ್ಕಳಿಗೆ ಜ್ಞಾನವನ್ನು ನೀಡಿ ಅವರ ಬದುಕನ್ನು ಸಾರ್ಥಕಗೊಳಿಸುವ ಕೆಲಸವನ್ನು ಶಿಕ್ಷಕ ಮಾಡುತ್ತಾನೆ. ಗುರುಕುಲ ಪದ್ದತಿಯಿಂದ ಆರಂಭವಾದ ಶಿಕ್ಷಣ ಇಂದಿಗೂ ತನ್ನ ಮೌಲ್ಯವನ್ನು ಉಳಿಸಿಕೊಂಡಿದೆ. ಕಾರಣ ಶಿಕ್ಷಕರು ತಮ್ಮ ಮಕ್ಕಳ ಶ್ರೇಯೋಭಿವೃದ್ದಿಗೆ ವಿಶ್ವಾಸ, ನಿಸ್ವಾರ್ಥದಿಂದ ಗುಣಮಟ್ಟದ ಶಿಕ್ಷಣವನ್ನು ನೀಡುವ ಮೂಲಕ ಶಿಕ್ಷಣದ ಮೌಲ್ಯವನ್ನು ಸಂರಕ್ಷಿಸಿದ್ದಾರೆ. ಇಂತಹ ಶಿಕ್ಷಕರಲ್ಲಿ ಇಂದು ನಿವೃತ್ತಿಯಾಗುತ್ತಿರುವ ಈ ಶಾಲೆಯ ಮುಖ್ಯೋಪಾಧ್ಯಾಯ ಎಂ.ಎಸ್. ಸತ್ಯನಾರಾಯಣರಾವ್ ಸಹ ಪ್ರಮುಖರಾಗಿದ್ದಾರೆಂದು ತಾಲ್ಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಡಿ.ಮಹಲಿಂಗಪ್ಪ ತಿಳಿಸಿದರು.

ಅವರು, ಸೋಮವಾರ ತಾಲ್ಲೂಕಿನ ಜಾಜೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಗಗೊಂಡನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಂ.ಎಸ್.ಸತ್ಯನಾರಾಯಣರವರು ಸೇವೆಯಿಂದ ನಿವೃತ್ತರಾದ ಹಿನ್ನೆಲೆಯಲ್ಲಿ ಅವರನ್ನು ಸಂಘದ ಪರವಾಗಿ ಗೌರವಿಸಿ ಬೀಳ್ಕೊಟ್ಟರು. ಶಿಕ್ಷಣ ಇಲಾಖೆಯಲ್ಲಿ ಸುಮಾರು ಮೂರು ದಶಕಗಳ ಕಾಲ ತಾಲ್ಲೂಕಿನ ವಿವಿಧ ಶಾಲೆಗಳಲ್ಲಿ ಎಂ.ಎಸ್.ಸತ್ಯನಾರಾಯಣರಾವ್ ಕಾರ್ಯನಿರ್ವಹಿಸಿದ್ದು ಅವರ ಕ್ರಿಯಾಶೀಲ ಚಟುವಟಿಕೆ ಎಲ್ಲರಿಗೂ ಮಾದರಿಯಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳ ಪರವಾಗಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಸಿಆರ್‌ಪಿ ನಳಿನಾಕ್ಷಿ, ಮುಖ್ಯ ಶಿಕ್ಷಕರಾಗಿ ಕಾರ್ಯನಿರ್ವಹಿಸಿದ ಸತ್ಯನಾರಾಯಣ ತಮ್ಮ ಸೇವಾಧಿಯಲ್ಲಿ ಎಂದಿಗೂ ನಿರ್ಲಕ್ಷ್ಯತೆ ತೋರದೆ ಮಕ್ಕಳಿಗೆ ಶಿಕ್ಷಣದಲ್ಲಿ ಆಸಕ್ತಿ ಹುಟ್ಟಿಸುವ ಕಾರ್ಯ ಮಾಡಿದ್ದಾರೆ. ಸಹ ಶಿಕ್ಷಕರಿಗೆ ಸೂಕ್ತ ಮಾರ್ಗದರ್ಶನ ನೀಡಿದ್ದಾರೆ. ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರಿಗೆ ಇಲಾಖೆಯ ಬಗ್ಗೆ ಅನೇಕ ಮಾಹಿತಿ ನೀಡಿ ಸಲಹೆ ಪಡೆದು ಕಾರ್ಯನಿರ್ವಹಿಸಿದ್ದಾರೆಂದರು.

ಎಸ್‌ಡಿಎಂಸಿ ಅಧ್ಯಕ್ಷ ಎನ್.ಜೆ.ಶಶಿಧರ ಮಾತನಾಡಿ, ನಮ್ಮ ಶಾಲೆಯಲ್ಲಿ ಕಳೆದ ಸುಮಾರು ನಾಲ್ಕು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿದ್ದು, ಇಡೀ ಶಾಲಾ ಆವರಣ ಯಾವುದೆ ಗಿಡವಿಲ್ಲದೆ ಬರಿದಾಗಿತ್ತು. ಆಧರೆ, ಇವರ ಅವಧಿಯಲ್ಲಿ ಇಡೀ ಆವರಣ ಗಿಡಗಳಿಂದ ಕಂಗೊಳಿಸುತ್ತಿದೆ. ತಮ್ಮ ವೈಯಕ್ತಿಕ ಖರ್ಚಿನಲ್ಲಿ ಶಾಲೆಗೆ ಹಲವಾರು ಕೊಡುಗೆ ನೀಡಿದ್ದಾರೆಂದರು.

ಸನ್ಮಾನವನ್ನು ಸ್ವೀಕರಿಸಿ, ಸೇವೆಯಿಂದ ನಿವೃತ್ತ ರಾದ ಮುಖ್ಯ ಶಿಕ್ಷಕ ಎಂ.ಎಸ್. ಸತ್ಯನಾರಾಯಣರಾವ್ ಮಾತ ನಾಡಿ, ಪ್ರತಿಯೊಬ್ಬ ಶಿಕ್ಷಕನೂ ಆತ್ಮವಿಶ್ವಾಸ, ಆಸಕ್ತಿಯಿಂದ ಕಾರ್ಯ ನಿರ್ವಹಿಸಬೇಕಾಗುತ್ತದೆ. ಬೇರೆ ಎಲ್ಲಾ ಇಲಾಖೆಗಿಂತ ಶಿಕ್ಷಣ ಇಲಾಖೆ ವಿಭಿನ್ನವಾಗಿದೆ. ಸಾರ್ವಜನಿಕರು, ಪೋಷಕರು ಹಾಗೂ ಮಕ್ಕಳ ಪ್ರೀತಿ, ವಿಶ್ವಾಸ ಎಂದಿಗೂ ಶಾಶ್ವತ ವಾಗಿರುತ್ತದೆ. ಇಲಾಖೆಯಲ್ಲಿ ಕೆಲಸ ಮಾಡಿದ ತೃಪ್ತಿ ನನಗಿದೆ. ನನ್ನ ಯಶಸ್ಸಿನಲ್ಲಿ ಎಲ್ಲರ ಸಹಕಾರವೂ ಇದೆ ಎಂದರು.

ಕಾರ್ಯಕ್ರಮದಲ್ಲಿ ಮಾಜಿ ಅಧ್ಯಕ್ಷ ಈರಣ್ಣ, ಪ್ರೌಢಶಾಲೆ ಮುಖ್ಯ ಶಿಕ್ಷಕ ಶ್ರೀನಿವಾಸ್, ನಿರ್ದೇಶಕ ಈರಣ್ಣ, ಮುಖ್ಯ ಶಿಕ್ಷಕ ಮಹಲಿಂಗಪ್ಪ, ಗ್ರಾಮ ಪಂಚಾಯಿತಿ ಸದಸ್ಯ ಸಿದ್ದೇಶ್, ವರಲಕ್ಷ್ಮಿ, ಹೆಂಜಡಿಯಪ್ಪ, ಓಬಳೇಶ್, ಮಹಂತೇಶ್, ವಾಸುದೇವರೆಡ್ಡಿ, ಪತ್ನಿ ಭಾರ್ಗವಿಸತ್ಯನಾರಾಯಣ, ಪ್ರಭಾರ ಮುಖ್ಯ ಶಿಕ್ಷಕ ಸದಾನಂದ ಹಾಗೂ ಸಹ ಶಿಕ್ಷಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.



**ಚಳ್ಳಕೆರೆ ತಾಲ್ಲೂಕಿನ ಜಾಜೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಗಗೊಂಡನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಂ.ಎಸ್.ಸತ್ಯನಾರಾಯಣರವರು ಸೇವೆಯಿಂದ ನಿವೃತ್ತರಾದ ಹಿನ್ನೆಲೆಯಲ್ಲಿ ಅವರನ್ನು ಸಂಘದ ಪರವಾಗಿ ಸನ್ಮಾನಿಸಲಾಯಿತು.**

# ಜನಪದ ಮತ್ತು ಜಾನಪದ ಕಲೆ ನಮ್ಮ ಸಂಸ್ಕೃತಿಯ ಅಂಗ



**ಚಿತ್ರದುರ್ಗ :** ನಮ್ಮ ಜನಪದ ಮತ್ತು ಜಾನಪದ ಕಲೆಯು ನಮ್ಮ ದೇಶದ ಸಂಸ್ಕೃತಿಯ ಅವಿಭಾಜ್ಯ ಅಂಗವಾಗಿದೆ ಎಂದು ರೋಟರಿ ಕ್ಲಬ್ ಅಧ್ಯಕ್ಷರಾದ ಬಿ.ಶಂಕ್ರಪ್ಪ ಹೇಳಿದರು.

ಚಿತ್ರದುರ್ಗ ಹೊರ ವಲಯದ ಮಠದ ಕುರುಬರ ಹಟ್ಟಿಯ ಬಸವೇಶ್ವರ ವಿದ್ಯಾ ಸಂಸ್ಥೆಯಲ್ಲಿ ಶ್ರೀ ಬುದ್ದ ಕ್ರೀಡಾ ಗ್ರಾಮೀಣಾಭಿವೃದ್ದಿ ಮತ್ತು ಸಾಂಸ್ಕೃತಿಕ ಕಲಾ ಸಂಘ ಹುಲ್ಲೆಹಾಳ್ ಮತ್ತು ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಇವರ ಸಂಯುಕ್ತಾಶ್ರಯದಲ್ಲಿ ಭಾನುವಾರ ಸಂಜೆ ನಡೆದ ಜಾನಪದ ಸಿರಿ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜನಪದ ಕಲೆಗಳಾದ ಕೋಲಾಟ, ಕರಡಿ ಕುಣಿತ, ಜನಪದ ಗೀತೆ, ಕೊಂಬು ಕಹಳೆ, ತಮಟೆ ವಾದ್ಯ, ಸೋಬಾನೆ ಪದ ಮುಂತಾದ ಗ್ರಾಮೀಣ ಕಲೆಗಳು ನಮ್ಮ ಗ್ರಾಮೀಣ ಸೊಗಡನ್ನು ಪ್ರತಿ ಬಿಂಬಿಸುತ್ತವೆ. ಈ ಹಿನ್ನಲೆಯಲ್ಲಿ ಇಂತಹ ಜನಪದ ಕಲೆಗಳನ್ನು ಉಳಿಸಿ ಬೆಳಸ ಬೇಕಾಗಿದೆ. ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಶ್ರೀ ಬಸವೇಶ್ವರ ವಿದ್ಯಾ ಸಂಸ್ಥೆಯ ಕಾರ್ಯದರ್ಶಿ ವಿ.ಕೆ.ಶಂಕ್ರಪ್ಪ, ಶ್ರೀ ಬಸವೇಶ್ವರ ವಿದ್ಯಾ ಸಂಸ್ಥೆಯ ಅಧ್ಯಕ್ಷರಾದ ಶ್ರೀಮತಿ ಪ್ರಭಾವತಿ ಶಂಕ್ರಪ್ಪ, ಜಿಲ್ಲಾ ವಿಕಲ ಚೇತನ ಪುನರ್ ವಸತಿ ಕೇಂದ್ರದ ನೋಡಲ್ ಆಧಿಕಾರಿ ಹರಿಪ್ರಸಾದ್, ಹುಲ್ಲೆಹಾಳ್‌ನ ಬುದ್ದ ಕ್ರೀಡಾ ಗ್ರಾಮೀಣಾಭೀವೃದ್ದಿ ಮತ್ತು ಸಾಂಸ್ಕೃತಿಕ ಕಲಾ ಸಂಘ ಅಧ್ಯಕ್ಷರಾದ ಶ್ರೀಮತಿ ರೇಖಮ್ಮ, ಕಾರ್ಯದರ್ಶಿ ಡಿ. ನಾಗರಾಜ್, ಧ್ವನಿ ಗ್ರಾಮೀಣಾಭೀವೃದ್ದಿ ಕಲಾ ಸಂಘದ ಕಾರ್ಯದರ್ಶಿ ಹುಲ್ಲೂರು ಕೃಷ್ಣಪ್ಪ ಭಾಗವಹಿಸಿದ್ದರು.

ಈ ಕಾರ್ಯಕ್ರಮದಲ್ಲಿ ಹುಲ್ಲೆಹಾಳ್‌ನ ಚಿನ್ನಸ್ವಾಮಿ ಮತ್ತು ಸಂಗಡಿಗರಿಂದ ಕೊಬ್ಬು ಕಹಳೆ, ನೆಲ್ಲಿಕಟ್ಟೆಯ ತಿಪ್ಪೇಸ್ವಾಮಿ ಮತ್ತು ಸಂಗಡಿಗರಿಂದ ಉರಿಮೆ ವಾದ್ಯ, ಕೂಡಗವಳ್ಳಿಯ ವಾಗೀಶ್ ಮತ್ತು ಸಂಗಡಿಗರಿಂದ ನಾಸಿಕ್ ಡೋಲ್, ಹಾಗೂ ಹುಲ್ಲೂರಿನ ನಿಂಗಪ್ಪ ಮತ್ತು ಸಂಗಡಿಗರಿಂದ ತಮಟೆ ವಾದ್ಯದ ಪ್ರದರ್ಶನ ನಡೆಯಿತು.

ಚಿತ್ರದುರ್ಗದ ಕೆ.ಗಂಗಾಧರ ಮತ್ತು ಸಂಗಡಿಗರಿಂದ ಸುಗಮ ಸಂಗೀತ, ಟಿ.ಓಬನ ಹಳ್ಳಿಯ ಹಿಮಂತ ರಾಜ್ ಮತ್ತು ಸಂಗಡಿಗರಿಂದ ಜಾನಪದ ಸಂಗೀತ, ಚಿತ್ರದುರ್ಗದ ಅಂಜಿನಪ್ಪ ಮತ್ತು ಸಂಗಡಿಗರಿಂದ ತತ್ವಪದ ದಾಸರ ಪದ ಹಾಗೂ ತುರವನೂರಿನ ಮೈಲಾರಿ ಮತ್ತು ಸಂಗಡಿಗರಿಂದ ವಚನ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು.

# ಡಿವೈಡರ್ ತೆರವಿಗೆ ವೈಜ್ಞಾನಿಕ ವರದಿ : ತಜ್ಞರ ನೇಮಕ

**ಚಿತ್ರದುರ್ಗ :** ನಗರದಲ್ಲಿ ನಿರ್ಮಿಸಲಾಗಿರುವ ಡಿವೈಡರ್ ಕುರಿತು ಸಾರ್ವಜನಿಕರು ಹಾಗೂ ಜನಪ್ರತಿನಿಧಿಗಳ ಸಭೆ ನಡೆಸಲಾಗಿದೆ. ಹಲವು ಕಡೆ ಡಿವೈಡರ್ ತೆರವುಗೊಳಿಸಿ ಯು ಟರ್ನ್ ಹಾಗೂ ಪಾದಚಾರಿಗಳ ಮಾರ್ಗ ನೀಡಲು ಸಾರ್ವಜನಿರು ಮನವಿ ಮಾಡಿದ್ದಾರೆ.

ಈ ಕುರಿತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ರಸ್ತೆ ಸುರಕ್ಷಾ ತಜ್ಞರು ಹಾಗೂ ನಗರ ಸಂಚಾರಿ ಪೊಲೀಸರ ಜೊತೆಗೂಡಿ ವೈಜ್ಞಾನಿಕವಾಗಿ ವರದಿ ನೀಡುವಂತೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಸೂಚನೆ ನೀಡಿದ್ದಾರೆ.

ಸೋಮವಾರ ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಷ್ಟ್ರಿಯ ಹೆದ್ದಾರಿ ಹಾಗೂ ನಗರ ರಸ್ತೆಗಳ ನಿಯಮಗಳು ಬೇರೆ ಇವೆ. ಇದರ ಬಗ್ಗೆ ಕೂಲಂಕು?ವಾಗಿ ಅಧ್ಯಯನ ನಡೆಸಿ, ನಗರದ ಸಾರ್ವಜನಿಕರ ಬೇಡಿಕೆ ಅನುಸರಿಸಿ ನಗರದ ಯಾವ ಭಾಗದಲ್ಲಿ ಡಿವೈಡರ್ ತೆರವುಗೊಳಿಸಿ, ಯು ಟರ್ನ್ ಹಾಗೂ ಪಾದಚಾರಿಗಳಿಗೆ ಅನುಕೂಲ ಮಾಡಿಕೊಡಬಹುದು ಎಂಬುದನ್ನು ಅಧಿಕಾರಿಗಳು ಪರಿಶೀಲನೆ ನಡೆಸಬೇಕು.

ಲೋಕೋಪಯೋಗಿ ಇಲಾಖೆ ಈಗಾಗಲೇ ಡಿವೈಡರ್ ನಿರ್ಮಿಸಿ ರಸ್ತೆ ಕಾಮಗಾರಿ ಪೂರ್ಣಗೊಳಿಸಿದೆ. ವೈಜ್ಞಾನಿಕವಾಗಿಯೇ ರಸ್ತೆಗಳನ್ನು ನಿರ್ಮಿಸಿದ್ದಾಗಿ ಅವರು ಹೇಳಿದ್ದಾರೆ. ಡಿವೈಡರ್ ತೆರವುಗೊಳಿಸುವುದರಿಂದ ಆಗುವ ತೊಂದರೆ, ಅನಾನುಕೂಲಗಳ ಬಗ್ಗೆಯೂ ತಜ್ಞರ ಸಮಿತಿ ಪರಿಶೀಲನೆ ನಡೆಸಬೇಕು. ಎಲ್ಲಿ ಸಾಧ್ಯವೋ ಅಲ್ಲಿ ಜನರ ಬೇಡಿ-ಕೆ ಮೇರೆಗೆ ಮುಂದಿನ ಕ್ರಮ ಕೈಗೊಳ್ಳಲಾದಾಗಿ ಹೇಳಿದರು.

**ಹಳೆ ಬೈಪಾಸ್ ರಸ್ತೆಯ ಅಭಿವೃದ್ಧಿಗೆ ಪ್ರಸಾವನೆ ಸಲ್ಲಿಸಿ :** ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ನಗರದ ಹಳೆ ಬೈಪಾಸ್ ರಸ್ತೆಯನ್ನು ನಗರ ಸಭೆ ಹಸ್ತಾಂತರಿಸುವ ಮುನ್ನ ಮೂಲಸೌಕರ್ಯಗಳನ್ನು ಅಭಿವೃದ್ಧಿ ಪಡಿಸಿ ಹಸ್ತಾಂತರಿಸಬೇಕು. ಹಳೆಯ ಬೈಪಾಸ್ ರಸ್ತೆಯಲ್ಲಿ ಬೀದಿ ದೀಪಗಳ ಅಳವಡಿಕೆ, ಅಗತ್ಯ ಇರುವಡೆ ಸ್ಕೈವಾಕ್ ನಿರ್ಮಿಸಬೇಕು.



ಈ ಕುರಿತು ವಿಸ್ತೃತ ಯೋಜನಾ ವರದಿ ಸಿದ್ದಪಡಿಸಿ ಅನುದಾನ ಮಂಜೂರಿಗೆ ಪ್ರಸಾವನೆಯನ್ನು ಹೆದ್ದಾರಿ ಪ್ರಾಧಿಕಾರಕ್ಕೆ ಸಲ್ಲಿಸಿ. ಈ ಕುರಿತು ಮಾನ್ಯ ಕೇಂದ್ರ ಸಚಿವರಾದ ನಾರಾಯಣಸ್ವಾಮಿಯವರು ಕೇಂದ್ರ ಹೆದ್ದಾರಿ ಸಚಿವರೊಂದಿಗೆ ಮಾತುಕತೆ ನಡೆಸುವರು ಎಂದರು.

**ಹೆದ್ದಾರಿ ಪಕ್ಕದ ಅನಧಿಕೃತ ಹೋಟೆಲ್ ಹಾಗೂ ಗೂಡು ಅಂಗಡಿ ತೆರಗೆ ಸೂಚನೆ :** ಹಿರಿಯೂರಿನ ಬೈ ಪಾಸ್ ರಸ್ತೆಯಲ್ಲಿ ಬಹಳ?ು ಜನರು ಅನಧಿಕೃತವಾಗಿ ಹೋಟೆಲ್, ಡಾಬಾ ಹಾಗೂ ಗೂಡು ಅಂಗಡಿಗಳನ್ನು ತೆರದಿದ್ದಾರೆ. ಈ ಸ್ಥಳಗಲ್ಲಿ ಲಾರಿಗಳು ನಿಂತು ಸುಗಮ ಸಂಚಾರಕ್ಕೆ ತೊಂದರೆಯಾಗುತ್ತಿದೆ. ನಗರ ಸಭೆಯಿಂದ ಪರವಾನಿಗೆ ಪಡೆದೇ, ಹೆದ್ದಾರಿ ಪ್ರಾಧಿಕಾರದ ಜಾಗದಲ್ಲಿ ಹೋಟೆಲ್, ಅಂಗಡಿ ನೆಡಸುತ್ತಿರುವರನ್ನು ಕೂಡಲೇ ಅಲ್ಲಿಂದ ತೆರವುಗೊಳಿಸಬೇಕು. ಬೆಸ್ಕಾಂ ಅಧಿಕಾರಿಗಳು ತಕ್ಷಣವೇ ಅನಧಿಕೃತ ಹೋಟೆಲ್ ಹಾಗೂ ಅಂಗಡಿಗಳಿಗೆ ನೀಡಿದ ವಿದ್ಯುತ್ ಸಂಪರ್ಕವನ್ನು ಕಡಿತಗೊಳಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು. ಜಿಆರ್.ಜೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಹೆದ್ದಾರಿ, ನಗರ ರಸ್ತೆಗಳಲ್ಲಿ ಸೂಚನಾ ಫಲಕಗಳ ಅವಳವಡಿಕೆ ಕುರಿತು, ಅಪಘಾತ ವಲಯದ ಕಪ್ಪು ಸ್ಥಳಗಳು, ರೈಲ್ವೇ ಓವರ್ ಬ್ರಿಡ್ಜ್ ಕೆಳಭಾಗದಲ್ಲಿ ನೀರು ನಿಲ್ಲದಂತೆ ಕಾಮಗಾರಿ ಕೈಗೊಳ್ಳುವ ಕುರಿತು ಚರ್ಚಿಸಲಾಯಿತು.

ಎಸ್.ಪಿ. ಕೆ.ಪರುಶುರಾಮ್, ಲೋಕಪಯೋಗಿ ಕಾರ್ಯಪಾಲಕ ಅಭಿಯಂತರ ಪಿ.ಎಸ್. ಮಲ್ಲಿಕಾರ್ಜುನ್, ರಾಷ್ಟ್ರಿಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಗೌರವ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಮುಥೇಶ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಆರ್. ರಂಗನಾಥ್, ಹೆದ್ದಾರಿ ಸುರಕ್ಷಾ ಅಧಿಕಾರಿ ನವೀನ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ವ್ಯಸನಮುಕ್ತ ಸಮಾಜಕ್ಕೆ ಕೈ ಜೋಡಿಸಿ

ವÉÆzÀ®¥ÀÄlzÀ¢AzÀ.. ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನದ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆ ಆಚರಿಸುತ್ತಿರುವುದು ಅರ್ಥಪೂರ್ಣವಾಗಿದೆ. ದುವ್ಯಸನಗಳು ಹಾಗೂ ದುಶ್ಚಟಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿ, ಮನಪರಿವರ್ತಿಸಿ, ಜನರಲ್ಲಿನ ದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭೀಕ್ಷೆಯ ರೂಪದಲ್ಲಿ ಸಂಗ್ರಹಿಸಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಡಾ. ಮಹಾಂತ ಶಿವಯೋಗಿಗಳು ಶ್ರಮಿಸಿದ್ದಾರೆ ಎಂದರು. ಶಿವಯೋಗಿಗಳು ವ್ಯಸನಮುಕ್ತ ವ್ಯಕ್ತಿ-ಕುಟುಂಬ-ಸಮಾಜ-ಗ್ರಾಮಗಳ ನಿರ್ಮಾಣ ಮಾಡುವ ಜೊತೆಗೆ ತಮ್ಮ ಜೋಳಿಗೆ ಕಾರ್ಯಕ್ರಮದಡಿಯಲ್ಲಿ ನಾಡಿನ ಪ್ರಖ್ಯಾತ ವೈದ್ಯರು, ಸಮಾಜ ವಿಜ್ಞಾನಿಗಳು, ಸಾಹಿತಿಗಳು, ಸಮಾಜ ಕಳಕಳಿಯ ಕವಿಗಳು, ಧರ್ಮ ಗುರುಗಳನ್ನು ಆಹ್ವಾನಿಸಿ, ಅವರಿಂದ ಉಪನ್ಯಾಸಗಳನ್ನು ಮಾಡಿಸುವ ಮೂಲಕ ವ್ಯಸನಗಳ ಮನಪರಿವರ್ತನೆ ಮಾಡುವುದರ ಜೊತೆಗೆ ಮಕ್ಕಳು, ವಿದ್ಯಾರ್ಥಿಗಳು, ಯುವ ಜನಾಂಗ ಇಂತಹ ಚಟಗಳಿಗೆ ಬಲಿಯಾಗದಂತೆ ಅರಿವು ಮೂಡಿಸುತ್ತಿದ್ದರು

ಅಪರ ಜಿಲ್ಲಾಧಿಕಾರಿ ಬಿ.ಟಿ ಕುಮಾರಸ್ವಾಮಿ ಅವರು ಮದ್ಯಪಾನ,ಮಾದಕ ವಸ್ತು, ತಂಬಾಕು ವಸ್ತುಗಳ ವ್ಯಸನ ಮುಕ್ತಗೊಳಿಸುವ ಪ್ರತಿಜ್ಞಾ ವಿಧಿ ಭೋಧಿಸಿದರು.

ಕಾರ್ಯಕ್ರಮದಲ್ಲಿ ಆಹಾರ ಇಲಾಖೆ ಜಂಟಿ ನಿರ್ದೇಶಕ ಮಧುಸೂಧನ್, ಜಿಲ್ಲಾ ಆಯು? ಅಧಿಕಾರಿ ಡಾ.ಜಗದೀಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಪಿ.ಎಂ.ವೇಣುಗೋಪಾಲ್, ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಜಿಲ್ಲಾಧಿಕಾರಿ ಕಚೇರಿ ಸಿಬ್ಬಂದಿಗಳು ಹಾಗೂ ವಾರ್ತಾ ಇಲಾಖೆ ಸಿಬ್ಬಂದಿಗಳು ಇದ್ದರು.

### ಮೊಬೈಲ್ ಚಿತ್ರೀಕರಣ ಪ್ರಕರಣ ಎಸ್.ಐ.ಟಿಗೆ ತನಿಖೆಗೆ ವಹಿಸಲ್ಲ

ಮೊದಲ ಪುಟದಿಂದ.. **ನೈತಿಕ ಪೊಲೀಸ್ ಗಿರಿ: ನಿರ್ದಾಕ್ಷಿಣ್ಯ ಕ್ರಮ :** ನೈತಿಕ ಪೊಲೀಸ್ ಗಿರಿ ಯಾರೇ ಮಾಡಿದರೂ ಕೂಡ ನಿರ್ದಾಕ್ಷಿಣ್ಯವಾಗಿ ಕ್ರಮ ತೆಗೆದುಕೊಳ್ಳಲು ತಿಳಿಸಲಾಗಿದೆ. ಯಾರೂ ಕಾನೂನನ್ನು ಕೈಗೆ ತೆಗೆದುಕೊಳ್ಳುವಂತಿಲ್ಲ ಎಂದು ಪೊಲೀಸರಿಗೆ ಸೂಚಿಸಲಾಗಿದೆ ಎಂದರು.

ಸೌಜನ್ಯ ಪ್ರಕರಣ: ಮೇಲ್ಮನವಿ ಸಲ್ಲಿ ಸುವ ಕುರಿತು ಪರಿಶೀಲನೆ ಸೌಜನ್ಯ ಅತ್ಯಾಚಾರ ಹಾಗೂ ಕೊಲೆ ಪ್ರಕರಣ ಸಿಬಿಐ ನ್ಯಾಯಾಲಯದಲ್ಲಿ ಇತ್ಯರ್ಥವಾಗಿದೆ. ಅವರ ಪೋ?ಕರು ಹಾಗೂ ಹೋರಾಟಗಾರರು ಈ ಪ್ರಕರಣದ ಮರುತನಿಖೆಗೆ ಒತ್ತಾಯಿಸಿದ್ದಾರೆ. ಕಾನೂನಿನ ಪ್ರಕಾರ ಏನು ಕ್ರಮ ಕೈಗೊಳ್ಳಬಹುದೆಂದು ವಿಚಾರ ಮಾಡಲಾಗುದು. ಕಾನೂನಿನ ಪ್ರಕಾರ ಉಚ್ಚ ನ್ಯಾಯಾಲಯಕ್ಕೆ ಮೇಲ್ಮನವಿ ಸಲ್ಲಿಸಬೇಕಾಗುತ್ತದೆ ಎಂದರು. ಅಧಿಕಾರಿಗಳಿಂದ ಲೋಪವಾಗಿದೆ ಎಂದು ತೀರ್ಪಿನಲ್ಲಿ ಉಲ್ಲೇಖವಿರುವ ಬಗ್ಗೆ ಉತ್ತರಿಸಿ , ತೀರ್ಪು ಓದಿದ ನಂತರ ಮೇಲ್ಮನವಿ ಸಲ್ಲಿಸಲು ಅವಕಾಶವಿದ್ದರೆ ಸಲ್ಲಿಸಲಾಗುವುದು ಎಂದರು.

**ಸಾಮಾಜಿಕ ಜಾಲತಾಣಗಳಲ್ಲಿ ಸುಳ್ಳು ಸುದ್ದಿ ಹಬ್ಬಿಸುವವರ ವಿರುದ್ಧ ಕ್ರಮ :** ಸಾಮಾಜಿಕ ಜಾಲತಾಣಗಳಲ್ಲಿ ಸರ್ಕಾರದ ವಿರುದ್ಧ ಅಥವಾ ವ್ಯಕ್ತಿ ಯ ವಿರುದ್ಧವಾಗಿ ಅನಗತ್ಯವಾಗಿ ಸುಳ್ಳು ಸುದ್ದಿಗಳನ್ನು ಹಬ್ಬಿಸಿದರೆ ಅವರ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ಟೀಕೆ ಮಾಡಿದರೂ ಕ್ರಮ ಕೈಗೊಳ್ಳುತ್ತಿದ್ದೀರಿ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿ, ಟೀಕೆ ಮಾಡಿದರೆ ಕ್ರಮ ತೆಗೆದುಕೊಳ್ಳುವುದಿಲ್ಲ. ಸುಳ್ಳು ಸುದ್ದಿ ಹಬ್ಬಿಸಿದರೆ ತೆಗೆದುಕೊಳ್ಳಲಾಗುವುದು ಎಂದರು. ಕುಟುಂಬದವರ ಮೇಲೆ ಸುಳ್ಳು ಸುದ್ದಿ ಹಬ್ಬಿಸುವುದು, ವೈಯಕ್ತಿಕವಾಗಿ ತೇಜೋವಧೆ ಮಾಡುವುದು ಬೇರೆ ಎಂದರು.

**ಪರಿಸರ ಸಂರಕ್ಷಣೆಯಲ್ಲಿ ಸರ್ಕಾರ ಹಿಂದೆಬೀಳುವುದಿಲ್ಲ :** ಕಸ್ತೂರಿ ರಂಗನ್ ವರದಿ ಬಗ್ಗೆ ಕೇಂದ್ರ ಸರ್ಕಾರ ತೀರ್ಮಾನ ಕೈಗೊಳ್ಳಬೇಕಿದೆ. ಪರಿಸರ ಸಂರಕ್ಷಣೆ ಯ ವಿಚಾರದಲ್ಲಿ ಸರ್ಕಾರ ಹಿಂದೆಬೀಳುವುದಿಲ್ಲ ಎಂದರು.

**ಬಿಟ್ ಕಾಯಿನ್ :** ಬಿಟ್ ಕಾಯಿನ್ ವಿಚಾರದಲ್ಲಿ ಎಸ್.ಐ.ಟಿ ವತಿಯಿಂದ ಇನ್ನೂ ಯಾರಿಗೂ ನೋಟೀಸು ಹೋಗದಿರುವ ಬಗ್ಗೆ ಮಾತನಾಡಿ ಎಸ್.ಐ.ಟಿ ಕ್ರಮವನ್ನು ವಹಿಸುತ್ತದೆ ಎಂದರು.

### ಜಿಲ್ಲಾಸ್ಪತ್ರೆಗೆ ಜಿಲ್ಲಾಧಿಕಾರಿಗಳ ಅನಿರೀಕ್ಷಿತ ಭೇಟಿ

**ನಮ್ಮ ಜನ ವಾರ್ತೆ ದಾವಣಗೆರೆ ;** ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ನಗರದ ಜಿಲ್ಲಾ ಚಿಗಟೇರಿ ಆಸ್ಪತ್ರೆಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಆಸ್ಪತ್ರೆಯ ಎಲ್ಲಾ ವಾರ್ಡ್‌ಗಳಿಗೆ ಭೇಟಿ ನೀಡಿ ರೋಗಿಗಳ ಆರೋಗ್ಯ ವಿಚಾರಿದರು ಮತ್ತು, ರೋಗಿಗಳಿಗೆ ಔಷದಗಳ ಕೊರತೆಯಾಗದಂತೆ ಸೂಕ್ತ ಚಿಕಿತ್ಸೆ ನೀಡಲು ವೈದ್ಯರಿಗೆ ತಿಳಿಸಿದರು.

ವಿಶೇಷವಾಗಿ ಡಯಾಲಿಸಿಸ್ ಘಟಕಕ್ಕೆ ಭೇಟಿ ನೀಡಿ ಡಯಾಲಿಸಿಸ್ ರೋಗಿಗಳಿಗೆ ಯಾವುದೇ ರೀತಿ ಕೊರತೆ-ಯಾಗದಂತೆ ನೋಡಿಕೊಳ್ಳಬೇಕು, ಆಸ್ಪತ್ರೆಯ ಕೊಠಡಿಗಳು ಹಾಗೂ ಹೊರ ಆವರಣ ಸ್ವಚ್ಛತೆ ಕುರಿತು ಗಮನ ಹರಿಸಬೇಕು ಸೂಚನೆ ನೀಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಾಗರಾಜ್, ಜಿಲ್ಲಾ ಶಸ್ತ್ರ ಚಿಕಿತ್ಸಾಧಿಕಾರಿ ಡಾ. ಷಣ್ಮುಖ ಉಪಸ್ಥಿತರಿದ್ದರು.

# ರೈನ್‌ಕೋಟ್ ವಿತರಣೆ : ಕೆ.ನಾಗೇಶ್

**ಚಳ್ಳಕೆರೆ :** ಕಳೆದ ಹಲವಾರು ವರ್ಷಗಳಿಂದ ಸಮಾಜಮುಖಿ ಚಟುವಟಿಕೆಗಳಲ್ಲಿ ಸ್ವ-ಯಂ ಪ್ರೇರಣೆಯಿಂದ ತೊಡಗಿಕೊಂಡಿರುವ ರೋಟರಿ ಮತ್ತು ಇನ್ನರ್ ವ್ಹೀಲ್ ಕ್ಲಬ್ ದಿನನಿತ್ಯ ವಿವಿಧ ರಂಗಗಳಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕ ಸಮೂಹಕ್ಕೆ ರೈನ್‌ಕೋಟ್‌ಗಳನ್ನು ಉಚಿತವಾಗಿ ವಿತರಿಸುವ ಮೂಲಕ ನೆರವಾಗಿದೆ ಎಂದು ರೋಟರಿ ಕ್ಲಬ್ ನೂತನ ಅಧ್ಯಕ್ಷ ಕೆ.ನಾಗೇಶ್ ತಿಳಿಸಿದರು.

ರೋಟರಿ ಕ್ಲಬ್ ಆವರಣದಲ್ಲಿ ಕೂಲಿ ಕಾರ್ಮಿಕರಿಗೆ ರೈನ್‌ಕೋಟ್ ವಿತರಿಸುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು. ಚಳ್ಳಕೆರೆ ನಗರದಲ್ಲಿ ವಿವಿಧ ಹಮಾಲಿ ಸಂಘಟನೆಗಳ ಸಾವಿರಾರು ಕಾರ್ಮಿಕರು, ಮಳೆ, ಬಿಸಿಲು, ಚಳಿ ಎನ್ನದೆ ಕಾರ್ಯನಿರ್ವಹಿಸುತ್ತಿದ್ದು ಎಲ್ಲಾ ಕಾರ್ಮಿಕರಿಗೂ ನೆರವು ನೀಡುವ ಉದ್ದೇಶವಿದ್ದರೂ ಸದ್ಯದ ಸ್ಥಿತಿಯಲ್ಲಿ ಸಾಧ್ಯವಾಗುತ್ತಿಲ್ಲವೆಂದರು.

ಇನ್ನರ್ ವ್ಹೀಲ್ ಕ್ಲಬ್ ಅಧ್ಯ-ಕ್ಷೆ ಮೀರಾರಮೇಶ್ ಮಾತನಾಡಿ, ಕಳೆದ ಸುಮಾರು ಮೂರು ವರ್ಷಗಳಿಂದ ಇನ್ನರ್ ವ್ಹೀಲ್ ಕ್ಲಬ್ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ಜನರ ಸೇವೆಯಲ್ಲಿ ತೊಡಗಿದೆ. ಕೂಲಿ ಕಾರ್ಮಿಕರು ಮಳೆ, ಚಳಿಯಲ್ಲೇ ಕಾರ್ಯನಿರ್ವಹಿಸಿ ತಮ್ಮ ಬದುಕನ್ನು ಸಾಗಿಸುತ್ತಿದ್ದು, ಇವರುಗಳಿಗೆ ನೆರವಾಗಲಿ ಎಂದು ವಿತರಣೆ ಮಾಡಲಾಗಿದೆ. ಕಾರ್ಯದರ್ಶಿ ಸುನಿತಾ, ವೀಣಾಸುರೇಶ್, ಬಿ.ವಿ.ಚಿದಾನಂದಮೂರ್ತಿ, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.




**ಚಳ್ಳಕೆರೆ ನಗರ ರೋಟರಿ ಕ್ಲಬ್ ಆವರಣದಲ್ಲಿ ಕೂಲಿ ಕಾರ್ಮಿಕರಿಗೆ ರೋಟರಿ ಕ್ಲಬ್ ನೂತನ ಅಧ್ಯಕ್ಷ ಕೆ.ನಾಗೇಶ್ ರೈನ್‌ಕೋಟ್ ವಿತರಿಸಿದರು.**

# ಸಚಿವರಿಗೆ ಮತ್ತು ಸ್ಥಳೀಯ ಶಾಸಕರಿಗೆ ಮನವಿ

**ಚಿತ್ರದುರ್ಗ :** ಕೊಳಗೇರಿ ನಿವಾಸಿಗಳು ಹಾಗೂ ನಗರದ ಬಡವರಿಗೆ ಹಕ್ಕುಪತ್ರಗಳನ್ನು ನೀಡುವಂತೆ ಕರ್ನಾಟಕ ಕೊಳಗೇರಿ ನಿವಾಸಿಗಳ ಸಂಯುಕ್ತ ಸಂಘಟನೆ ಜಿಲ್ಲಾ ಸಮಿತಿಯಿಂದ ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಕಚೇರಿ ಸಹಾಯಕರ ಮೂಲಕ ರಾಜ್ಯದ ಮುಖ್ಯಮಂತ್ರಿ, ಪೌರಾಡಳಿತ ಹಾಗೂ ನಗರಾಭಿವೃದ್ಧಿ ಸಚಿವರಿಗೆ ಮತ್ತು ಸ್ಥಳೀಯ ಶಾಸಕರಿಗೆ ಮನವಿ ಸಲ್ಲಿಸಿದರು.



**ಕೊಳಗೇರಿಗಳಲ್ಲಿ ವಾಸಿಸುತ್ತಿರುವ ಕುಟುಂಬಗಳಿಗೆ ಹಕ್ಕುಪತ್ರಗಳನ್ನು ನೀಡುವಂತೆ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ.**

ನಗರದಲ್ಲಿರುವ ಘೋಷಿತ ಮತ್ತು ಅಘೋಷಿತ ಕೊಳಚೆ ಪ್ರದೇಶಗಳಲ್ಲಿ ಅನೇಕ ವರ್ಷಗಳಿಂದಲೂ ವಾಸಿಸುತ್ತಿರುವ ಬಡ ಕುಟುಂಬಗಳಿಗೆ ಹಕ್ಕುಪತ್ರಗಳನ್ನು ವಿತರಿಸಬೇಕು. 2022 ಸೆಪ್ಟಂಬರ್‌ನಲ್ಲಿ ನೀಡಿರುವ ಹಕ್ಕುಪತ್ರಗಳಿಗೆ ನಗರಸಭೆ ಮತ್ತು ಪುರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಖಾತೆ ಮಾಡಿಸಿಕೊಡಬೇಕು.

ಆಶ್ರಯ ಬಡಾವಣೆ ನಿವಾಸಿಗಳಿಗೆ ಇ-ಸ್ವತ್ತು ಮತ್ತು ಸಾಲ ತೀರುವಳಿ ಪತ್ರ ಕೊಡಬೇಕು. ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವ್ಯಾಪ್ತಿಯ 100 ಗುಂಪು ಮನೆಗಳಿಗೆ ಹಕ್ಕುಪತ್ರ ಇಲ್ಲವೇ ನೊಂದಣಿ ಮಾಡಿಸಬೇಕು ಎಂದು ಕೆ.ಕೆ. ಎನ್.ಎಸ್.ಎಸ್.ಜಿಲ್ಲಾ ಸಮಿತಿ ಅಧ್ಯಕ್ಷ ಗಣೇಶ್ ಒತ್ತಾಯಿಸಿದರು.

ಅಯೂಬ್‌ಖಾನ್, ಸೈಫುಲ್ಲಾ, ಮಹಬೂಬಿ, ಶಬೀನಾಜಾನ್, ಮೈಲಾರಪ್ಪ, ಲೀಲಾವತಿ, ರಜೀಯಾ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಪ್ರಮುಖ ಸುದ್ದಿ

# ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿ

**ನಮ್ಮ ಜನ ವಾರ್ತೆ ದಾವಣಗೆರೆ :** ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಡಾ. ಮಹಾಂತ ಶಿವಯೋಗಿಗಳ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.

ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದೊಂದಿಗೆ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜರುಗಿದ ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ಏರ್ಪಡಿಸಲಾದ ವ್ಯಸನಮುಕ್ತ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಡಾ.ಮಹಾಂತ ಶಿವಯೋಗಿ ಅವರ ಜನ್ಮದಿನವಾದ ಆಗಸ್ಟ್ 1 ನ್ನು ರಾಜ್ಯ ಸರ್ಕಾರವು ರಾಜ್ಯಾದ್ಯಂತ ವ್ಯಸನ ಮುಕ್ತ ದಿನವನ್ನಾಗಿ ಆಚರಿಸುತ್ತಿದ್ದು, ಕರ್ನಾಟಕ ರಾಜ್ಯವನ್ನು ವ್ಯಸನ ಮುಕ್ತ ರಾಜ್ಯವಾಗಿ ಮಾಡಲು ಸಾರ್ವಜನಿಕರು ಹಾಗೂ ಯುವಜನತೆ ವ್ಯಸನಗಳಿಂದ ಮುಕ್ತವಾಗಲು ಈ ದಿನಾಚರಣೆಯು ಪ್ರೇರಣೆಯಾಗಿದೆ.

ವ್ಯಸನ ಮುಕ್ತ ಸಮಾಜ ನಿರ್ಮಾಣಕ್ಕೆ 1975 ರಿಂದ ಕೈಗೊಂಡ ಮಹಾಂತ ಜೋಳಿಗೆ ಕಾರ್ಯಕ್ರಮ ಅತ್ಯಂತ ವಿಶಿಷ್ಟವಾದುದು, ದುವ್ರ್ಯಸನಗಳು ಹಾಗೂ ದುಶ್ಚಟಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಿ, ಮನಃಪರಿವರ್ತಿಸಿ, ದುಶ್ಚಟಗಳನ್ನು ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಸಂಗ್ರಹಿಸಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಇವರ ನೀಡಿದ ಕೊಡುಗೆ ಅಪಾರವಾದುದು.

ವ್ಯಸನ ಮುಕ್ತ ವ್ಯಕ್ತಿ, ಕುಟುಂಬ, ಸಮಾಜ, ಗ್ರಾಮಗಳ ನಿರ್ಮಾಣ ಮಾಡುವ ಜೊತೆಗೆ ತಮ್ಮ ಜೋಳಿಗೆ ಕಾರ್ಯಕ್ರಮದಲ್ಲಿ ನಾಡಿನ ಪ್ರಖ್ಯಾತ ವೈದ್ಯರು, ಸಮಾಜ ವಿಜ್ಞಾನಿಗಳು, ಸಾಹಿತಿಗಳು, ಸಮಾಜ ಕಳಕಳಿಯ ಕವಿಗಳು, ಧರ್ಮ ಗುರುಗಳನ್ನು ಆಹ್ವಾನಿಸಿ ಅವರಿಂದ ಉಪನ್ಯಾಸಗಳನ್ನು ಮಾಡಿಸುವ ಮೂಲಕ ವ್ಯಸನಿಗಳ ಮನಪರಿವರ್ತನೆ ಮಾಡುವುದುರ ಜೊತೆಗೆ ಮಕ್ಕಳು, ವಿದ್ಯಾರ್ಥಿಗಳು ಹಾಗೂ ಯುವ ಜನಾಂಗ ಚಟಗಳಿಗೆ ಬಲಿಯಾಗದಂತೆ ಅರಿವು ಮೂಡಿಸುತ್ತಿದ್ದರು.

ಜಾತಿ, ಮತ, ಪಂಗಡ, ಧರ್ಮ, ಭಾಷೆ, ದೇಶವೆನ್ನದೇ 42 ವರ್ಷಗಳ ಕಾಲ ದೇಶದಲ್ಲಿ ಮಾತ್ರವಲ್ಲದೇ ಇಂಗ್ಲೆಂಡ್ ಸೇರಿದಂತೆ ವಿದೇಶದಲ್ಲೂ ತಮ್ಮ ಮಹಾಂತ ಜೋಳಿಗೆ ಹಿಡಿದು ಜನರಲ್ಲಿನ ದುಶ್ಚಟಗಳ ಭಿಕ್ಷೆ ಬೇಡಿದವರು ಶಿವಯೋಗಿಗಳು ಎಂದರು.



ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಸುರೇಶ್ ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಧನಂಜಯಪ್ಪ ಬಿ, ಬಸವ ಬಳಗದ ಶಂಭುಲಿಂಗಪ್ಪ, ವಿವಿಧ ಇಲಾಖೆ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T